ಸಂಪುಟ: 11 ಸಂಚಿಕೆ: 191 ಪುಟ: 4+2 ಬೆಲೆ : 3.00 ಗುರುವಾರ, ಸೆಪ್ಟೆಂಬರ್ 03, 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 191 Pages : 4+2 Rate : 3.00 Thursday, September 03, 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2020-22

ವಿಜಯ ಸಾಕ್ಷಿ ದಿನಪತ್ರಿಕೆ ಈಗ ಆನ್ ಲೈನ್ ನಲ್ಲಿಯೂ ಲಭ್ಯ. ನಿಮ್ಮ ನೆಚ್ಚಿನ ಪತ್ರಿಕೆಯನ್ನು ಓದಲು www.epaper.Vijayasakshi.com ಜಾಲತಾಣಕ್ಕೆ ಭೇಟಿ ನೀಡಿ. ಕ್ಷಣ ಕ್ಷಣದ ಸುದ್ದಿಗಳಿಗಾಗಿ www.Vijayasakshi.com ವೀಕ್ಷಿಸಿ.

### ಸಾರ್ವಜನಿಕರ ಕುಂದುಕೊರತೆಗಳಿಗೆ ತ್ವರಿತ, ಗುಣಮಟ್ಟದ ಪರಿಹಾರಕ್ಕೆ ಡಿಸಿ ಶ್ರೀಧರ ಸೂಚನೆ

# ಸೆ.5ರಿಂದ ಮನೆ ಬಾಗಿಲಿಗೆ 'ಪ್ರಜಾಸೇವೆ'

**ವಿಜಯಸಾಕ್ಷಿ ಸುದ್ದಿ, ಗದಗ**

ಸಾರ್ವಜನಿಕರ ಕುಂದುಕೊರತೆಗಳಿಗೆ ಕೇವಲ ಉತ್ತರ ನೀಡುವುದಷ್ಟೇ ಅಲ್ಲದೆ, ಸಮಸ್ಯೆಗಳಿಗೆ ತ್ವರಿತ ಹಾಗೂ ತೃಪ್ತಿಕರವಾದ ಗುಣಮಟ್ಟದ ಪರಿಹಾರ ಒದಗಿಸುವುದು ಅಧಿಕಾರಿಗಳ ಜವಾಬ್ದಾರಿಯಾಗಿದೆ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಕಟ್ಟುನಿಟ್ಟಿನ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ಪ್ರಜಾಸೇವಾ ಆಂದೋಲನದಡಿ ತಾಲೂಕು ಹಾಗೂ ಹೋಬಳಿ ಮಟ್ಟದಲ್ಲಿ ಆಯೋಜಿಸಲಾಗುತ್ತಿರುವ ಸಭೆಗಳ ಪೂರ್ವಭಾವಿ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸೆಪ್ಟೆಂಬರ್ 5ರಿಂದ 'ಪ್ರಜಾಸೇವೆ ಅಭಿಯಾನ ನಿಮ್ಮ ಮನೆ ಬಾಗಿಲಿಗೆ' ಕಾರ್ಯಕ್ರಮ ಆರಂಭವಾಗಲಿದೆ. ಪ್ರತಿ ಶನಿವಾರ ಬೆಳಿಗ್ಗೆ 10 ಗಂಟೆಯಿಂದ ಸಂಜೆವರೆಗೆ ತಾಲೂಕು ಹಾಗೂ ಹೋಬಳಿ ಮಟ್ಟದಲ್ಲಿ ಪ್ರಜಾಸೇವಾ ಆಂದೋಲನ ಸಭೆಗಳು ನಡೆಯಲಿವೆ. ಸಾರ್ವಜನಿಕರ ಸಮಸ್ಯೆಗಳಿಗೆ ತ್ವರಿತ ಇತ್ಯರ್ಥ ಹಾಗೂ ಗುಣಮಟ್ಟದ ಪರಿಹಾರ ದೊರೆಯುವಂತೆ ಅಧಿಕಾರಿಗಳು ಅಗತ್ಯ ಪೂರ್ವಸಿದ್ಧತೆಗಳನ್ನು ಕೈಗೊಳ್ಳಬೇಕು ಎಂದು ನಿರ್ದೇಶಿಸಿದರು.

ಜಿಲ್ಲೆಯ ಎಲ್ಲ ತಾಲೂಕು ಹಾಗೂ ಹೋಬಳಿ ಮಟ್ಟದ ಸಭೆಗಳನ್ನು ನಿಗದಿತ ಸಮಯಕ್ಕೆ ಅಚ್ಚುಕಟ್ಟಾಗಿ ಆಯೋಜಿಸಬೇಕು. ಸಭೆಗಳ ನೇರ ಪ್ರಸಾರ ವ್ಯವಸ್ಥೆಯನ್ನು ಮುಖ್ಯಮಂತ್ರಿಗಳ ಕಚೇರಿಗೆ (ಸಿಎಂಒ) ಲಭ್ಯವಾಗುವಂತೆ ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದರು.



ಜಿಲ್ಲಾ ಉಸ್ತುವಾರಿ ಸಚಿವರ ನೇತೃತ್ವದಲ್ಲಿ ಪ್ರತಿ ತಿಂಗಳ ಮೊದಲ ಹಾಗೂ ಮೂರನೇ ಶನಿವಾರ, ಸ್ಥಳೀಯ ಶಾಸಕರ ನೇತೃತ್ವದಲ್ಲಿ ಎರಡನೇ ಹಾಗೂ ನಾಲ್ಕನೇ ಶನಿವಾರ ಪ್ರಜಾಸೇವಾ ಆಂದೋಲನ ಸಭೆಗಳು ನಡೆಯಲಿವೆ ಎಂದು ತಿಳಿಸಿದರು.

ಮನೆ-ಮನೆಗೆ ತೆರಳಿ ಕಾರ್ಯಕ್ರಮದ ಕುರಿತು ಜಾಗೃತಿ ಮೂಡಿಸಬೇಕು. ಸಾರ್ವಜನಿಕರು ತಮ್ಮ ಸಮಸ್ಯೆಗಳನ್ನು ಸಭೆಯಲ್ಲಿ ಸಲ್ಲಿಸಲು ಅನುಕೂಲವಾಗುವಂತೆ ನಿಗದಿತ ಅರ್ಜಿ ನಮೂನೆಗಳನ್ನು ಮನೆಗಳಿಗೆ ತಲುಪಿಸಬೇಕು. ಸಭೆಗೆ ಆಗಮಿಸುವಾಗಲೇ ಅರ್ಜಿಗಳನ್ನು ಭರ್ತಿ ಮಾಡಿಕೊಂಡು ಬರುವಂತೆ ಸಾರ್ವಜನಿಕರಲ್ಲಿ ಅರಿವು ಮೂಡಿಸಬೇಕು ಎಂದು ಜಿಲ್ಲಾಧಿಕಾರಿ ಸೂಚಿಸಿದರು.

ತಾಲೂಕು ಮಟ್ಟದ ಅಧಿಕಾರಿಗಳು ತಮ್ಮ ವ್ಯಾಪ್ತಿಯಲ್ಲಿಯೇ ಇತ್ಯರ್ಥಪಡಿಸಬಹುದಾದ ಅರ್ಜಿಗಳಿಗೆ ಯಾವುದೇ ವಿಳಂಬ ಮಾಡದೆ ತಕ್ಷಣ ಪರಿಹಾರ ಒದಗಿಸಬೇಕು. ಅಧಿಕಾರ ವ್ಯಾಪ್ತಿಯಲ್ಲಿರುವ ವಿಷಯಗಳಿಗೆ ಮೇಲಾಧಿಕಾರಿಗಳ ಮಾರ್ಗದರ್ಶನದ ನೆಪ ಹೇಳದೆ, ಅಧಿಕಾರಿಗಳು ಸ್ವತಃ ಸೂಕ್ತ ನಿರ್ಧಾರ ಕೈಗೊಂಡು ಸಾರ್ವಜನಿಕರಿಗೆ ಪರಿಹಾರ ನೀಡಬೇಕು ಎಂದು ಕಟ್ಟುನಿಟ್ಟಾಗಿ ಹೇಳಿದರು.

ಸಾರ್ವಜನಿಕರು ಗ್ರಾಮ ಒನ್ ಕೇಂದ್ರಗಳಲ್ಲಿಯೂ ತಮ್ಮ ಅರ್ಜಿ ಹಾಗೂ ಅಹವಾಲುಗಳನ್ನು ಸಲ್ಲಿಸಬಹುದಾಗಿದೆ. ಪ್ರಜಾಸೇವೆ ಸಭೆ ನಡೆಯುವ ಸ್ಥಳದಲ್ಲೂ ಗ್ರಾಮ ಒನ್ ಮಳಿಗೆ ಸ್ಥಾಪಿಸಿ, ಕಂಪ್ಯೂಟರ್ ಹಾಗೂ ಇಂಟರ್‌ನೆಟ್ ಸೌಲಭ್ಯ ಕಲ್ಪಿಸಲಾಗುವುದು. ಸ್ಥಳದಲ್ಲಿಯೇ ಆನ್‌ಲೈನ್ ಮೂಲಕ ಅರ್ಜಿ ಹಾಗೂ ದೂರು ಸಲ್ಲಿಸಲು ಅವಕಾಶ ನೀಡಲಾಗುವುದು.

> ಅರ್ಜಿದಾರರಿಗೆ ಕೇವಲ ಉತ್ತರ ನೀಡುವುದಷ್ಟೇ ಅಧಿಕಾರಿಗಳ ಕರ್ತವ್ಯವಲ್ಲ. ಅವರ ಸಮಸ್ಯೆಗೆ ಸಂಪೂರ್ಣ ತೃಪ್ತಿಕರ ಹಾಗೂ ಗುಣಮಟ್ಟದ ಪರಿಹಾರ ಒದಗಿಸಬೇಕು. ತಮ್ಮ ಅಧಿಕಾರ ವ್ಯಾಪ್ತಿಯಲ್ಲಿರುವ ಸಮಸ್ಯೆಗಳನ್ನು ವಿಳಂಬ ಮಾಡದೆ ಸ್ಥಳೀಯ ಮಟ್ಟದಲ್ಲಿಯೇ ಇತ್ಯರ್ಥ ಪಡಿಸಬೇಕು.
> - ಸಿ.ಎನ್. ಶ್ರೀಧರ್, ಜಿಲ್ಲಾಧಿಕಾರಿ

ಸಾರ್ವಜನಿಕರು ಗ್ರಾಮ ಒನ್ ಕೇಂದ್ರಗಳಿಗೆ ಭೇಟಿ ನೀಡಿ, ಸಹಾಯವಾಣಿ ಸಂಖ್ಯೆ 1902 ಅಥವಾ ipgrs.karnataka.gov.in ಮೂಲಕವೂ ಅರ್ಜಿ ಹಾಗೂ ಅಹವಾಲುಗಳನ್ನು ಸಲ್ಲಿಸಬಹುದು ಎಂದು ತಿಳಿಸಿದರು.

ಪಿಂಚಣಿ, ಪಹಣಿ, ವಸತಿ, ಹೊಸ ಪಡಿತರ ಚೀಟಿ, ಸಾರಿಗೆ, ರಸ್ತೆ ಅಭಿವೃದ್ಧಿ, ಕುಡಿಯುವ ನೀರು, ದೇವಸ್ಥಾನ ಜೀರ್ಣೋದ್ಧಾರ, ಸರ್ಕಾರಿ ಶಾಲೆ ಹಾಗೂ ಅಂಗನವಾಡಿಗಳ ಅಭಿವೃದ್ಧಿ, ವಿಬಿಜಿ ರಾಮ್‌ಜಿ, ಪೊಲೀಸ್ ಸೇವೆ, ಖಾಸಗಿ ಉದ್ಯೋಗ, ಕೆರೆ ತುಂಬಿಸುವ ಯೋಜನೆ, ಗ್ಯಾರಂಟಿ ಯೋಜನೆಗಳು ಸೇರಿದಂತೆ ವಿವಿಧ ಸಮಸ್ಯೆಗಳ ಕುರಿತು ಸಾರ್ವಜನಿಕರು ಅರ್ಜಿ ಹಾಗೂ ದೂರು ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.

ಸ್ವೀಕೃತ ಅರ್ಜಿಗಳನ್ನು ಪ್ರತಿ ಬುಧವಾರ ತಾಲೂಕು, ಉಪವಿಭಾಗ ಹಾಗೂ ಜಿಲ್ಲಾ ಮಟ್ಟದಲ್ಲಿ ಮೂರು ಹಂತಗಳಲ್ಲಿ ಪರಿಶೀಲಿಸಿ ವಿಲೇವಾರಿ ಕ್ರಮ ಕೈಗೊಳ್ಳಲಾಗುವುದು. ಬೆಳಿಗ್ಗೆ 9ರಿಂದ 11 ಗಂಟೆಯವರೆಗೆ ತಾಲೂಕು ಮಟ್ಟದಲ್ಲಿ, ಬೆಳಿಗ್ಗೆ 11ರಿಂದ ಮಧ್ಯಾಹ್ನ 1 ಗಂಟೆಯವರೆಗೆ ಉಪವಿಭಾಗಾಧಿಕಾರಿ ಮಟ್ಟದಲ್ಲಿ ಹಾಗೂ ಮಧ್ಯಾಹ್ನ 3ರಿಂದ ಸಂಜೆ 5 ಗಂಟೆಯವರೆಗೆ ಜಿಲ್ಲಾಧಿಕಾರಿ ಮಟ್ಟದಲ್ಲಿ ಅರ್ಜಿಗಳ ಪರಿಶೀಲನೆ ನಡೆಯಲಿದೆ ಎಂದು ತಿಳಿಸಿದರು.

ಅರ್ಜಿ ವಿಲೇವಾರಿ ಪ್ರಗತಿ ಕುರಿತು ಪ್ರತಿ 15 ದಿನಕ್ಕೊಮ್ಮೆ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಜಿಲ್ಲೆಗೆ ಭೇಟಿ ನೀಡಿ ಸಂಬಂಧಿಸಿದ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಪರಿಹಾರಕ್ಕೆ ಸೂಚನೆ ನೀಡಲಿದ್ದಾರೆ. ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಪ್ರತಿ ತಿಂಗಳು ರಾಜ್ಯಮಟ್ಟದ ಪ್ರಗತಿ ಪರಿಶೀಲನಾ ಸಭೆಯೂ ನಡೆಯಲಿದೆ ಎಂದು ಹೇಳಿದರು.

ಸಾರ್ವಜನಿಕರಿಗೆ ಸರ್ಕಾರದ ವಿವಿಧ ಯೋಜನೆಗಳು ಹಾಗೂ ಇಲಾಖೆಗಳ ಸೇವೆಗಳ ಕುರಿತು ಸಮರ್ಪಕ ಮಾಹಿತಿ ದೊರೆಯುವಂತೆ ಪ್ರತಿಯೊಂದು ಇಲಾಖೆಯೂ ತಮ್ಮ ಯೋಜನೆಗಳ ವಿವರಗಳನ್ನು ಒಳಗೊಂಡ ಮಾಹಿತಿ ಪುಸ್ತಕ ಅಥವಾ ಮಾಹಿತಿ ಫಲಕಗಳನ್ನು ಪ್ರದರ್ಶಿಸಬೇಕು ಎಂದು ಜಿಲ್ಲಾಧಿಕಾರಿ ಸೂಚಿಸಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್., ಜಿಲ್ಲಾ ಪಂಚಾಯಿತಿ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮುಕುಲ್ ಜೈನ್, ಉಪವಿಭಾಗಾಧಿಕಾರಿ ಗಂಗಪ್ಪ ಎಂ., ಡಿವೈಎಸ್‌ಪಿ ಮುರ್ತುಜಾ ಖಾದ್ರಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

## ಮೂರು ತಿಂಗಳಿಗೊಮ್ಮೆ ಕುಂದುಕೊರತೆ ಸಭೆ: ಸಿಇಒ ಭರವಸೆ

**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾ ಪಂಚಾಯಿತಿಗೆ ನೂತನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯಾಗಿ (ಸಿಇಒ) ಆಗಮಿಸಿರುವ ಮುಕುಲ್ ಜೈನ್ ಅವರನ್ನು ವಿಬಿಜಿ-ರಾಮ್-ಜಿ ಯೋಜನೆಯ ನೌಕರರ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ಬುಧವಾರ ಭೇಟಿ ಮಾಡಿ ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಸಂಘದ ಜಿಲ್ಲಾಧ್ಯಕ್ಷ ಹಾಗೂ ರಾಜ್ಯ ಉಪಾಧ್ಯಕ್ಷ ಸುರೇಶ್ ಬಾಳಿಕಾಯಿ ಅವರು, ನೌಕರರ ಹಿತದೃಷ್ಟಿಯಿಂದ ಪ್ರತಿ ಮೂರು ತಿಂಗಳಿಗೊಮ್ಮೆ ವಿಬಿಜಿ-ರಾಮ್-ಜಿ ಯೋಜನೆಯ ನೌಕರರ ಕುಂದುಕೊರತೆ ಸಭೆ ನಡೆಸುವಂತೆ ಸಿಇಒ ಮುಕುಲ್ ಜೈನ್ ಅವರಿಗೆ ಮನವಿ ಸಲ್ಲಿಸಿದರು.

ಮನವಿಗೆ ಸ್ಪಂದಿಸಿದ ಸಿಇಒ ಮುಕುಲ್ ಜೈನ್ ಅವರು, ವಿಬಿಜಿ-ರಾಮ್-ಜಿ ಯೋಜನೆಯ ಎಲ್ಲ ನೌಕರರನ್ನು ಕರೆದು ಸಭೆ ನಡೆಸಿ, ಅವರ ಸಮಸ್ಯೆಗಳು ಹಾಗೂ ಕುಂದುಕೊರತೆಗಳನ್ನು ಆಲಿಸುವುದಾಗಿ ಭರವಸೆ ನೀಡಿದರು. ಈ ಸಂದರ್ಭದಲ್ಲಿ ಸಂಘದ ರಾಜ್ಯ ಪ್ರತಿನಿಧಿ ಕಿರಣಕುಮಾರ್, ನರಗುಂದ ತಾಲೂಕು ಅಧ್ಯಕ್ಷ ಹನುಮಂತ ಡಂಬಳ, ರೋಣ ತಾಲೂಕು ಅಧ್ಯಕ್ಷೆ ಶಾಂತಾ ತಿಮ್ಮರಡ್ಡಿ, ಮುಂಡರಗಿ ತಾಲೂಕು ಪ್ರತಿನಿಧಿ ಬಸವರಾಜ ಮನ್ನಮ್ಮನವರ, ಗದಗದ ನವೀನ ಬಸರಿ, ಶಿರಹಟ್ಟಿಯ ವೀರೇಶ ಪಟ್ಟಣಶೆಟ್ಟಿ, ಲಕ್ಷ್ಮೇಶ್ವರದ ಶ್ರೀನಿವಾಸ ಕಲಾಲ ಸೇರಿದಂತೆ ಜಿಲ್ಲಾ ಪದಾಧಿಕಾರಿಗಳಾದ ಪಕ್ಕೀರೇಶ ನಿಟ್ಟಾಲಿ, ಅರುಣ ಸಿಂಗ್ರಿ, ಹರೀಶ್ ಸೊಬರದ, ಲಿಂಗರಾಜ ಮುದಿಗೌಡರ, ಮಲ್ಲಿಕಾರ್ಜುನ ಸರ್ವಿ, ವೀರಭದ್ರಪ್ಪ ಸಜ್ಜನ, ಲಿಂಗರಾಜ ಅರಿಶಿಣದ, ಮಂಜುನಾಥ ತಳವಾರ, ಅಜಯ್ ಅಬ್ಬಿಗೇರಿ ಹಾಗೂ ವಿವಿಧ ತಾಲೂಕುಗಳ ನೌಕರರು ಉಪಸ್ಥಿತರಿದ್ದರು.

### ಯಳವತ್ತಿಯಲ್ಲಿ ನೂತನ ಭವನ ಉದ್ಘಾಟಿಸಿದ ಸಭಾಧ್ಯಕ್ಷ ಜಿ.ಎಸ್. ಪಾಟೀಲ

# ಗ್ರಾಮದ ಒಗ್ಗಟ್ಟಿಗೆ ಸಮುದಾಯ ಭವನ ಸೇತುವೆ

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಗ್ರಾಮದ ಅಭಿವೃದ್ಧಿ ಎಂದರೆ ಕೇವಲ ರಸ್ತೆ, ಕಟ್ಟಡ ಹಾಗೂ ಮೂಲಸೌಕರ್ಯಗಳ ನಿರ್ಮಾಣವಲ್ಲ, ಜನರಲ್ಲಿ ಪ್ರೀತಿ, ಸಹಕಾರ, ಸಾಮರಸ್ಯ ಹಾಗೂ ಸಾಮಾಜಿಕ ಪ್ರಜ್ಞೆಯನ್ನು ಬೆಳೆಸುವುದೂ ನಿಜವಾದ ಅಭಿವೃದ್ಧಿಯ ಭಾಗವಾಗಿದೆ ಎಂದು ವಿಧಾನಸಭೆ ಸಭಾಧ್ಯಕ್ಷ ಜಿ.ಎಸ್. ಪಾಟೀಲ ಹೇಳಿದರು.

ತಾಲೂಕಿನ ಯಳವತ್ತಿ ಗ್ರಾಮದಲ್ಲಿ ನೂತನವಾಗಿ ನಿರ್ಮಿಸಿರುವ ಶ್ರೀ ಗುಂಡೇಶ್ವರ ಸಮುದಾಯ ಭವನವನ್ನು ಬುಧವಾರ ಉದ್ಘಾಟಿಸಿ ಅವರು ಮಾತನಾಡಿದರು.

ಗ್ರಾಮಗಳ ಅಭಿವೃದ್ಧಿಯು ದೇಶದ ಅಭಿವೃದ್ಧಿಗೆ ಪೂರಕವಾಗಿದೆ. ಕೃಷಿಯನ್ನೇ ಬದುಕಾಗಿಸಿಕೊಂಡಿರುವ ಗ್ರಾಮೀಣ ಜನರು ತಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣದ ಜತೆಗೆ ಸಂಸ್ಕಾರ, ಧರ್ಮನಿಷ್ಠೆ ಹಾಗೂ ಮಾನವೀಯ ಮೌಲ್ಯಗಳನ್ನು ನೀಡಬೇಕು ಎಂದು ಉಜ್ಜಯಿನಿ ಪೀಠದ ಶ್ರೀ ಸಿದ್ಧಲಿಂಗ ರಾಜದೇಶಿಕೇಂದ್ರ ಜಗದ್ಗುರುಗಳು ಆಶೀರ್ವಚನ ನೀಡಿದರು.

ಸಮುದಾಯ ಭವನವು ಗ್ರಾಮದ ಸಾಮಾಜಿಕ ಬದುಕಿನ ಕೇಂದ್ರವಾಗಿ ರೂಪುಗೊಳ್ಳಬೇಕು. ಎಲ್ಲ ಸಮುದಾಯದವರು ಭವನವನ್ನು ಸಮಾನವಾಗಿ ಬಳಸಿಕೊಂಡು ಸೌಹಾರ್ದತೆ ಹಾಗೂ ಸಹಬಾಳ್ವೆಗೆ ಮಾದರಿಯಾಗಬೇಕು ಎಂದು ಹೇಳಿದರು.



> ಗ್ರಾಮದ ಅಭಿವೃದ್ಧಿ ಎಂದರೆ ಕೇವಲ ರಸ್ತೆ ಮತ್ತು ಕಟ್ಟಡಗಳ ನಿರ್ಮಾಣವಲ್ಲ. ಜನರ ನಡುವೆ ಪ್ರೀತಿ, ಸಹಕಾರ, ಸಾಮರಸ್ಯ ಮತ್ತು ಸಾಮಾಜಿಕ ಪ್ರಜ್ಞೆ ಬೆಳೆಯಬೇಕು. ಸಮುದಾಯ ಭವನಗಳು ಎಲ್ಲ ವರ್ಗದ ಜನರನ್ನು ಒಂದುಗೂಡಿಸುವ ಕೇಂದ್ರಗಳಾಗಿ, ಸಾಮಾಜಿಕ ಹಾಗೂ ಸಾಂಸ್ಕೃತಿಕ ಚಟುವಟಿಕೆಗಳ ವೇದಿಕೆಗಳಾಗಿ ರೂಪುಗೊಳ್ಳಬೇಕು.
> -ಜಿ.ಎಸ್. ಪಾಟೀಲ, ವಿಧಾನಸಭೆ ಸಭಾಧ್ಯಕ್ಷರು

ಇಂದು ತಂತ್ರಜ್ಞಾನ, ಸಂಪರ್ಕ ಸಾಧನಗಳು, ರಾಜಕೀಯ ಸೇರಿದಂತೆ ವಿವಿಧ ಕಾರಣಗಳಿಂದ ಸಮಾಜದಲ್ಲಿ ಸೌಹಾರ್ದತೆ ಹಾಗೂ ಸಾಮರಸ್ಯಕ್ಕೆ ಧಕ್ಕೆಯಾಗುತ್ತಿದೆ. ಆದರೆ ಗ್ರಾಮೀಣ ಭಾಗದಲ್ಲಿ ಎಲ್ಲ ಜಾತಿ-ಜನಾಂಗದವರು ಸಹೋದರತ್ವದ ಭಾವನೆಯಿಂದ ಬದುಕು ಸಾಗಿಸುತ್ತಿರುವ ಪರಂಪರೆ ಇಂದಿಗೂ ಜೀವಂತವಾಗಿದ್ದು, ಅದು ಮುಂದುವರಿಯಬೇಕು ಎಂದರು.

ದೇವರು, ಧರ್ಮ, ಶಿಕ್ಷಣ ಹಾಗೂ ಸಮಾಜಕ್ಕಾಗಿ ನಿತ್ಯದ ಬದುಕಿನಲ್ಲಿ ಕೈಲಾದಷ್ಟು ಸಹಾಯ-ಸಹಕಾರ ಮಾಡುವ ಮೂಲಕವೇ ಬದುಕಿಗೆ ಸಾರ್ಥಕತೆ ದೊರೆಯುತ್ತದೆ ಎಂದು ಜಗದ್ಗುರುಗಳು ತಿಳಿಸಿದರು.

ಮಾಜಿ ಶಾಸಕರಾದ ಜಿ.ಎಸ್. ಗಡ್ಡದೇವರಮಠ, ರಾಮಣ್ಣ ಲಮಾಣಿ ಹಾಗೂ ರಾಮಕೃಷ್ಣ ದೊಡ್ಡಮನಿ ಮಾತನಾಡಿ, ಯಾವುದೇ ಗ್ರಾಮದ ಪ್ರಗತಿಗೆ ಸರ್ಕಾರದ ಯೋಜನೆಗಳ ಜತೆಗೆ ಸ್ಥಳೀಯ ಜನರ ಸಹಕಾರ ಹಾಗೂ ಸಂಘಟಿತ ಪ್ರಯತ್ನವೂ ಅಗತ್ಯವಾಗಿದೆ. ಗ್ರಾಮಸ್ಥರ ಸಹಭಾಗಿತ್ವದಿಂದ ನಿರ್ಮಾಣಗೊಂಡಿರುವ ಇಂತಹ ಜನೋಪ ಯೋಗಿ ಕಟ್ಟಡಗಳು ಮುಂದಿನ ಪೀಳಿಗೆಗೂ ಪ್ರಯೋಜನಕಾರಿಯಾಗಲಿವೆ ಎಂದರು.

ಭವನ ನಿರ್ಮಾಣಕ್ಕೆ ಶ್ರಮಿಸಿದ ಶ್ರೀ ಗುಂಡೇಶ್ವರ ದೇವಸ್ಥಾನ ಟ್ರಸ್ಟ್ ಕಮಿಟಿ, ಗುರುಹಿರಿಯರು, ದಾನಿಗಳು ಹಾಗೂ ಗ್ರಾಮಸ್ಥರ ಕಾರ್ಯವನ್ನು ಗಣ್ಯರು ಶ್ಲಾಘಿಸಿದರು. ಶ್ರೀ ಗುಂಡೇಶ್ವರ ದೇವಸ್ಥಾನ ಟ್ರಸ್ಟ್ ಕಮಿಟಿಯ ಅಧ್ಯಕ್ಷ ಗುಂಡಪ್ಪಗೌಡ ಪಾಟೀಲ ಅಧ್ಯಕ್ಷತೆ ವಹಿಸಿದ್ದರು. ಇದೇ ಸಂದರ್ಭದಲ್ಲಿ ದಾನಿಗಳನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಟಿ. ಈಶ್ವರ, ಸುನೀಲ ಮಹಾಂತಶೆಟ್ಟರ, ಈರಪ್ಪ ಶಿಗ್ಲಿ, ಬೂದನಗೌಡ ನಿಂಗನಗೌಡ್ರ, ಜೋಗೆಪ್ಪ ಶಿರಬಡಗಿ, ಮೃತ್ಯುಂಜಯ ಹಿರೇಮಠ, ಫಕ್ಕಿರೇಶ ಜವಳಿ, ವಿರೂಪಾಕ್ಷ ಮೇಟಿ, ಎಸ್.ಜಿ. ಪಾಟೀಲ, ಎಸ್.ಜಿ. ಕಲ್ಮೇಶ್ವರಮಠ, ಜಿ.ಬಿ. ಪೂಜಾರ, ವಿ.ಜಿ. ಪಾಟೀಲ, ಆರ್.ಬಿ. ಮಲ್ಲರಡ್ಡಿ, ಆರ್.ಎಸ್. ನಿಂಗನಗೌಡ್ರ, ವಿಶ್ವನಾಥ ಚಿಂಚಲಿ, ಸಿ.ಬಿ. ಪಾಟೀಲ ಸೇರಿದಂತೆ ಶ್ರೀ ಗುಂಡೇಶ್ವರ ದೇವಸ್ಥಾನ ಟ್ರಸ್ಟ್ ಕಮಿಟಿಯ ಸದಸ್ಯರು, ಗ್ರಾಮದ ಗುರುಹಿರಿಯರು ಹಾಗೂ ಗ್ರಾಮಸ್ಥರು ಪಾಲ್ಗೊಂಡಿದ್ದರು.

ಕಾರ್ಯಕ್ರಮದ ಅಂಗವಾಗಿ ಮುಂಡರಗಿಯ ಕರ್ನಾಟಕ ಜಾನಪದ ಕಲಾ ಸಂಘದಿಂದ ಜಾನಪದ ಸಂಭ್ರಮ ಕಾರ್ಯಕ್ರಮ ನಡೆಯಿತು. ಜಾನಪದ ಕಲಾವಿದರು ವಿವಿಧ ಕಲಾ ಪ್ರಕಾರಗಳ ಮೂಲಕ ಗ್ರಾಮೀಣ ಸಂಸ್ಕೃತಿ, ಪರಂಪರೆ ಹಾಗೂ ಜನಜೀವನವನ್ನು ಅನಾವರಣಗೊಳಿಸಿದರು. ಜಾನಪದ ಗೀತೆ, ನೃತ್ಯ ಹಾಗೂ ವಿವಿಧ ಕಲಾ ಪ್ರದರ್ಶನಗಳು ಕಾರ್ಯಕ್ರಮಕ್ಕೆ ಮೆರುಗು ತಂದವು.

## ರಾಹುಲ್ ವಿರುದ್ಧದ ಎಫ್‌ಐಆರ್ ಖಂಡಿಸಿ ಸೆ.7ರಂದು ಪ್ರತಿಭಟನೆ



**ವಿಜಯಸಾಕ್ಷಿ ಸುದ್ದಿ, ಗದಗ**

ಉತ್ತರಾಖಂಡದಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರಿಗೆ ಅವಮಾನ ವಾಗಿದೆ ಎಂದು ಆರೋಪಿಸಲಾದ ಘಟನೆ ಕುರಿತು ಪ್ರಶ್ನಿಸಿದ್ದಕ್ಕಾಗಿ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ವಿರುದ್ಧ ದಾಖಲಿಸಿರುವ ಎಫ್‌ಐಆರ್ ಅನ್ನು ಕೂಡಲೇ ಹಿಂಪಡೆಯ ಬೇಕು ಎಂದು ಆಗ್ರಹಿಸಿ ಸೆಪ್ಟೆಂಬರ್ 7ರಂದು ಸಂಜೆ 4 ಗಂಟೆಗೆ ನಗರದಲ್ಲಿ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳ ಲಾಗಿದೆ ಎಂದು ಜಿಲ್ಲಾ ಯೂಥ್ ಕಾಂಗ್ರೆಸ್ ಅಧ್ಯಕ್ಷ ಕೃಷ್ಣಗೌಡ ಪಾಟೀಲ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಟಿಪ್ಪು ವೃತ್ತದಿಂದ ಜಿಲ್ಲಾಡಳಿತ ಕಚೇರಿವರೆಗೆ ಪ್ರತಿಭಟನಾ ಮೆರವಣಿಗೆ ನಡೆಸಲಾಗುವುದು. ಜಿಲ್ಲಾ ಕಾಂಗ್ರೆಸ್‌ನ ವಿವಿಧ ಘಟಕಗಳ ಪದಾಧಿಕಾರಿಗಳು, ಮುಖಂಡರು ಹಾಗೂ ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಪ್ರತಿಭಟನೆಯಲ್ಲಿ ಭಾಗವಹಿಸಲಿದ್ದಾರೆ ಎಂದು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಬಿ.ಬಿ. ಅಸೂಟಿ, ಅಶೋಕ ಮಂದಾಲಿ, ಶಕುಂತಲಾ ಅಕ್ಕಿ, ಬಸವರಾಜ ಕಡೆಮನಿ ಸೇರಿದಂತೆ ಜಿಲ್ಲಾ ಕಾಂಗ್ರೆಸ್‌ನ ವಿವಿಧ ಘಟಕಗಳ ಪದಾಧಿಕಾರಿಗಳು ಹಾಗೂ ಮುಖಂಡರು ಉಪಸ್ಥಿತರಿದ್ದರು.

### ಜಿಲ್ಲಾ ಕ್ರೀಡಾಂಗಣದ ಸ್ವರೂಪ ಹಾಳು ಮಾಡದಂತೆ ಆಗ್ರಹ | ಕಾಮಗಾರಿ ಸ್ಥಗಿತಕ್ಕೆ ಒತ್ತಾಯ

# ಜಿಲ್ಲಾ ಕ್ರೀಡಾಂಗಣದ ಸ್ವರೂಪ ಹಾಳು ಮಾಡದಿರಿ

**ವಿಜಯಸಾಕ್ಷಿ ಸುದ್ದಿ, ಗದಗ**

ರಾಷ್ಟ್ರೀಯ ಹಬ್ಬಗಳು, ದಸರಾ ಕ್ರೀಡೆಗಳು ಸೇರಿದಂತೆ ವಿವಿಧ ಕ್ರೀಡಾಕೂಟಗಳಿಗೆ ವೇದಿಕೆಯಾಗಿರುವ ನಗರದ ಜಿಲ್ಲಾ ಕ್ರೀಡಾಂಗಣದ ಮೂಲ ಸ್ವರೂಪಕ್ಕೆ ಧಕ್ಕೆ ತರುವ ರೀತಿಯಲ್ಲಿ ಸಿಂಥೆಟಿಕ್ ಫುಟ್‌ಬಾಲ್ ಮೈದಾನ ನಿರ್ಮಾಣಕ್ಕೆ ಮುಂದಾಗಿರುವುದು ಖಂಡನೀಯ ಎಂದು ಹಿಂದೂ ಸಂಘಟನೆಯ ಮುಖಂಡ ರಾಜು ಖಾನಪ್ಪನವರ ಆರೋಪಿಸಿದರು.

ನಗರದ ಪತ್ರಿಕಾ ಭವನದಲ್ಲಿ ಬುಧವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜಿಲ್ಲಾ ಕ್ರೀಡಾಂಗಣದಲ್ಲಿ ಆರಂಭಿಸಿರುವ ಸಿಂಥೆಟಿಕ್ ಫುಟ್‌ಬಾಲ್ ಮೈದಾನದ ಕಾಮಗಾರಿಗೆ ಕ್ರೀಡಾಪಟುಗಳಿಂದ ವಿರೋಧ ವ್ಯಕ್ತವಾಗಿದ್ದು, ಕೂಡಲೇ ಕಾಮಗಾರಿ ಸ್ಥಗಿತಗೊಳಿಸಿ ಕ್ರೀಡಾಪಟುಗಳ ಅಗತ್ಯಕ್ಕೆ ತಕ್ಕಂತೆ ಕ್ರೀಡಾಂಗಣವನ್ನು ಅಭಿವೃದ್ಧಿಪಡಿಸಬೇಕು ಎಂದು ಒತ್ತಾಯಿಸಿದರು.

ಜಿಲ್ಲಾ ಕ್ರೀಡಾಂಗಣವು ಒಂದೇ ಕ್ರೀಡೆಗೆ ಸೀಮಿತವಾಗದೆ ವಿವಿಧ ಕ್ರೀಡಾಪಟುಗಳು, ಮಕ್ಕಳು ಹಾಗೂ ಸಾರ್ವಜನಿಕರ ಬಳಕೆಗೆ ಅನುಕೂಲವಾಗುವ ಬಹುಪಯೋಗಿ ಕೇಂದ್ರವಾಗಬೇಕು. ಸಿಂಥೆಟಿಕ್ ಫುಟ್‌ಬಾಲ್ ಮೈದಾನ ನಿರ್ಮಿಸಿದರೆ ಇತರ ಕ್ರೀಡಾ ಚಟುವಟಿಕೆಗಳಿಗೆ ಹಾಗೂ ಸಾರ್ವಜನಿಕರ ಓಡಾಟಕ್ಕೆ ತೊಂದರೆಯಾಗಲಿದೆ ಎಂದು ಆತಂಕ ವ್ಯಕ್ತಪಡಿಸಿದರು.



ಈಗಾಗಲೇ ಕ್ರೀಡಾಂಗಣದಲ್ಲಿ ಬಾಸ್ಕೆಟ್‌ಬಾಲ್ ಹಾಗೂ ಸ್ಕೇಟಿಂಗ್‌ಗೆ ಒಂದೇ ಮೈದಾನ ಬಳಸುವ ವ್ಯವಸ್ಥೆಯಿದ್ದು, ಅಥ್ಲೆಟಿಕ್ಸ್ ಟ್ರ್ಯಾಕ್‌ನಲ್ಲಿಯೂ ಸಮರ್ಪಕ ಸೌಲಭ್ಯಗಳಿಲ್ಲ. ಕೇವಲ ನಾಲ್ವರು ಏಕಕಾಲಕ್ಕೆ ಓಡುವಷ್ಟು ಮಾತ್ರ ಅವಕಾಶವಿದೆ. ಇಂತಹ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವ ಬದಲು ಮತ್ತೊಂದು ಸಿಂಥೆಟಿಕ್ ಮೈದಾನ ನಿರ್ಮಾಣಕ್ಕೆ ಮುಂದಾಗಿರುವುದು ಸರಿಯಲ್ಲ ಎಂದು ದೂರಿದರು.

ಈಗಿರುವ ಸಿಂಥೆಟಿಕ್ ಟ್ರ್ಯಾಕ್‌ಗೆ ಸುಮಾರು 18 ವರ್ಷಗಳಾಗಿದ್ದು, ಅದರ ಬಳಕೆಯ ಅವಧಿಯೂ ಮುಗಿದಿದೆ. ಅದರ ಸ್ಥಿತಿಗತಿ ಪರಿಶೀಲಿಸಿ ಕ್ರೀಡಾಪಟುಗಳ ಅಗತ್ಯಕ್ಕೆ ಅನುಗುಣವಾಗಿ ಹೊಸ ವ್ಯವಸ್ಥೆ ರೂಪಿಸಬೇಕು. ಸ್ಥಳೀಯ ಶಾಸಕರು ಹಾಗೂ ಅಧಿಕಾರಿಗಳು ತಕ್ಷಣ ಗಮನಹರಿಸದಿದ್ದರೆ ಹೋರಾಟ ರೂಪಿಸಲಾಗುವುದು ಎಂದು ಎಚ್ಚರಿಸಿದರು.

> ಜಿಲ್ಲಾ ಕ್ರೀಡಾಂಗಣವು ಎಲ್ಲ ಕ್ರೀಡಾಪಟುಗಳಿಗೂ ಉಪಯೋಗವಾಗುವಂತಿರಬೇಕು. ಅವೈಜ್ಞಾನಿಕ ಕಾಮಗಾರಿಗಳ ಮೂಲಕ ಅದರ ಮೂಲ ಸ್ವರೂಪಕ್ಕೆ ಧಕ್ಕೆ ತರಬಾರದು.
> - ರಾಜು ಖಾನಪ್ಪನವರ

ರವಿಕಾಂತ ಅಂಗಡಿ, ವೆಂಕನಗೌಡ ಗೋವಿಂದಗೌಡ್ರ ಹಾಗೂ ಅರವಿಂದ ಹುಲ್ಲೂರು ಮಾತನಾಡಿ, ಕ್ರೀಡಾ ಕ್ಷೇತ್ರದ ಬಗ್ಗೆ ಜ್ಞಾನ ಹೊಂದಿರುವ ಅಧಿಕಾರಿಗಳಿಗೆ ಸೂಕ್ತ ಸ್ಥಾನಮಾನ ನೀಡಬೇಕು. ಪ್ರಭಾರಿ ಅಧಿಕಾರಿಗಳ ಮೂಲಕ ಮಹತ್ವದ ಕ್ರೀಡಾ ಯೋಜನೆಗಳನ್ನು ನಿರ್ವಹಿಸುವುದರಿಂದ ಸಮಸ್ಯೆಗಳು ಉಂಟಾಗುತ್ತಿವೆ ಎಂದು ಆರೋಪಿಸಿದರು. ಜಿಲ್ಲಾ ಕ್ರೀಡಾಂಗಣವನ್ನು ರಾಜಕೀಯ ಹಸ್ತಕ್ಷೇಪದಿಂದ ಮುಕ್ತಗೊಳಿಸಿ, ಕ್ರೀಡಾಪಟುಗಳ ಅಗತ್ಯಕ್ಕೆ ಅನುಗುಣವಾಗಿ ಅಭಿವೃದ್ಧಿಪಡಿಸಬೇಕು ಎಂದು ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಪರಮೇಶ ನಾಯಕ್, ಮಹಾಂತೇಶ ಪಾಟೀಲ, ದೇವರಾಜ ದೊಡ್ಡಮನಿ, ನಾಗರಾಜ ಬಂಡಿವಡ್ಡರ, ಮಲ್ಲಿಕಾರ್ಜುನ ಬನ್ನಿಗಿಡದ, ಸಾಗರ, ಪ್ರಭು ಪಾಟೀಲ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಮಾಹಿತಿ ಹಕ್ಕು ಬಾಕಿ ಅರ್ಜಿಗಳ ತ್ವರಿತ ವಿಲೇವಾರಿಗೆ ಸೂಚನೆ

**ವಿಜಯಸಾಕ್ಷಿ ಸುದ್ದಿ, ಗದಗ**

ಮಾಹಿತಿ ಹಕ್ಕು ಕಾಯ್ದೆಯಡಿ ಬಾಕಿ ಇರುವ ಅರ್ಜಿಗಳನ್ನು ತ್ವರಿತವಾಗಿ ವಿಲೇವಾರಿ ಮಾಡಿ, ಸಾರ್ವಜನಿಕರಿಗೆ ಅಗತ್ಯ ಮಾಹಿತಿಯನ್ನು ನಿಗದಿತ ಕಾಲಮಿತಿಯೊಳಗೆ ಒದಗಿಸುವಂತೆ ಕರ್ನಾಟಕ ಮಾಹಿತಿ ಆಯೋಗದ ರಾಜ್ಯ ಮಾಹಿತಿ ಆಯುಕ್ತ ಪ್ರಕಾಶ ನಾರಾಯಣ ಚನ್ನಾಳಕರ ಅಧಿಕಾರಿಗಳಿಗೆ ಸೂಚಿಸಿದರು.

ಬೆಳಗಾವಿ ಜಿಲ್ಲೆಯ ವಿವಿಧ 112ಕ್ಕೂ ಹೆಚ್ಚು ಕಚೇರಿಗಳಲ್ಲಿ ಪರಿಶೀಲನೆ ನಡೆಸಲಾಗಿದ್ದು, ಸುಮಾರು 300ಕ್ಕೂ ಅಧಿಕ ಪ್ರಕರಣಗಳು ಬಾಕಿ ಇರುವುದಾಗಿ ತಿಳಿಸಲಾಗಿದೆ.

ಪೊಲೀಸ್, ಕಂದಾಯ, ಪಂಚಾಯತ್ ರಾಜ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡ ಅವರು, ನಿಯಮಾನುಸಾರ ಕ್ರಮ ಕೈಗೊಂಡು ಬಾಕಿ ಅರ್ಜಿಗಳನ್ನು ಶೀಘ್ರ ವಿಲೇವಾರಿ ಮಾಡುವಂತೆ ನಿರ್ದೇಶನ ನೀಡಿದರು.

## ಕೊಪ್ಪಳ ವಿವಿ ಹಂಗಾಮಿ ಕುಲಪತಿಗೆ ಅತಿಥಿ ಉಪನ್ಯಾಸಕರಿಂದ ಸತ್ಕಾರ



**ವಿಜಯಸಾಕ್ಷಿ ಸುದ್ದಿ, ಕೊಪ್ಪಳ**

ಕೊಪ್ಪಳ ವಿಶ್ವವಿದ್ಯಾಲಯದ ಹಂಗಾಮಿ ಕುಲಪತಿಯಾಗಿ ನೇಮಕಗೊಂಡಿರುವ ವಾಣಿಜ್ಯಶಾಸ್ತ್ರ ವಿಭಾಗದ ಸಹ ಪ್ರಾಧ್ಯಾಪಕರಾದ ಡಾ. ಟಿ.ವಿ. ವಾರುಣಿ ಅವರನ್ನು ಕೊಪ್ಪಳ ಜಿಲ್ಲೆಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಅತಿಥಿ ಉಪನ್ಯಾಸಕರು ಸತ್ಕರಿಸಿ ಗೌರವಿಸಿದರು.

ಈ ಸಂದರ್ಭದಲ್ಲಿ ಡಾ. ವೀರಣ್ಣ ಸಜ್ಜನರ್, ಡಾ. ಸಣ್ಣದೇವೇಂದ್ರಸ್ವಾಮಿ, ಡಾ. ತುಕಾರಾಂ, ಡಾ. ಶಿವಬಸಪ್ಪ ಮಸ್ಕಿ, ಡಾ. ಮಹಾಂತೇಶ ನೆಲಾಗಣಿ, ಬಸವರಾಜ ಕರುಗಲ್, ಜ್ಞಾನೇಶ್ವರ ಪತ್ತಾರ, ಸೋಮೇಶ್, ವಿಜಯಕುಮಾರ್ ಕೆ., ಡಾ. ಗಿರಿಜಾ ತುರಮುರಿ ಹಾಗೂ ಡಾ. ಸಾವಿತ್ರಿ ಕಣವಿ ಉಪಸ್ಥಿತರಿದ್ದರು.

## ವಿಭಜನೆಯ ಮಾತಲ್ಲ, ಸಮಾಜವನ್ನು ಒಗ್ಗೂಡಿಸುವ ಮಾತುಗಳನ್ನಾಡಲಿ: ಸಚಿವ ರಾಯರಡ್ಡಿಗೆ ರಂಭಾಪುರಿ ಜಗದ್ಗುರು ಸಲಹೆ

# ಧರ್ಮಗಳ ನಡುವೆ ದ್ವೇಷ ಬೇಡ... ಸಂವಾದ ಬೇಕು

**ವಿಜಯಸಾಕ್ಷಿ ಸುದ್ದಿ, ಬಾಳೆಹೊನ್ನೂರು**

ಜವಾಬ್ದಾರಿಯುತ ಸ್ಥಾನದಲ್ಲಿರುವ ಕರ್ನಾಟಕ ಸರ್ಕಾರದ ಉನ್ನತ ಶಿಕ್ಷಣ ಸಚಿವ ಬಸವರಾಜ ರಾಯರಡ್ಡಿ ಅವರು ಸಾರ್ವಜನಿಕ ಸಭೆ-ಸಮಾರಂಭಗಳಲ್ಲಿ ಧರ್ಮದಂತಹ ಸೂಕ್ಷ್ಮ ವಿಷಯಗಳ ಕುರಿತು ಹೆಚ್ಚು ಸಂಯಮದಿಂದ ಮಾತನಾಡಬೇಕಿತ್ತು ಎಂದು ವೀರಶೈವ ಪಂಚಪೀಠಗಳ ಒಕ್ಕೂಟ ವ್ಯವಸ್ಥೆಯ ಸಂಚಾಲಕರಾದ ಬಾಳೆಹೊನ್ನೂರಿನ ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ವಿಷಾದ ಹಾಗೂ ಆತಂಕ ವ್ಯಕ್ತಪಡಿಸಿದ್ದಾರೆ.

ಇತ್ತೀಚೆಗೆ ಹಿಂದೂ ಸಂಸ್ಕೃತಿ ಹಾಗೂ ಇಸ್ಲಾಂ ಧರ್ಮದ ಕುರಿತು ಸಚಿವರು ನೀಡಿರುವ ಹೇಳಿಕೆ ಚರ್ಚೆಗೆ ಗ್ರಾಸವಾಗಿರುವ ಹಿನ್ನೆಲೆಯಲ್ಲಿ, ಬುಧವಾರ ಶ್ರೀ ಜಗದ್ಗುರು ರಂಭಾಪುರಿ ಪೀಠದಲ್ಲಿ ನಡೆದ ಶ್ರಾವಣ ಮಾಸದ ಧರ್ಮ ಸಮಾರಂಭದಲ್ಲಿ ತಮ್ಮನ್ನು ಭೇಟಿಯಾದ ಪತ್ರಕರ್ತರೊಂದಿಗೆ ಅವರು ಮಾತನಾಡಿದರು.



ಯಾವುದೇ ಧರ್ಮವನ್ನು ಗೌರವಿಸುವುದು ತಪ್ಪಲ್ಲ. ಆದರೆ, ಒಂದು ಧರ್ಮವನ್ನು ಮತ್ತೊಂದು ಧರ್ಮದೊಂದಿಗೆ ಹೋಲಿಸಿ ಶ್ರೇಷ್ಠತೆಯ ಮಾನದಂಡದಲ್ಲಿ ಮಾತನಾಡುವುದು ಸಮಾಜದಲ್ಲಿ ಅನಗತ್ಯ ಭಾವನಾತ್ಮಕ ಗೊಂದಲಕ್ಕೆ ಕಾರಣವಾಗಬಹುದು ಎಂದು ಹೇಳಿದರು.

> ಧರ್ಮಗಳ ನಡುವೆ ಸಂಘರ್ಷವಲ್ಲ, ಸಂವಾದ ಬೇಕು. ಸಮುದಾಯಗಳ ನಡುವೆ ದ್ವೇಷವಲ್ಲ, ಪರಸ್ಪರ ಗೌರವ ಬೇಕು. ಸಚಿವರಿಂದ ವಿಭಜನೆಯ ಮಾತಲ್ಲ, ಸಮಾಜವನ್ನು ಒಗ್ಗೂಡಿಸುವ ಮಾತುಗಳನ್ನು ನಿರೀಕ್ಷಿಸುತ್ತೇವೆ.
> - ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು

ಭಾರತದ ವೈಶಿಷ್ಟ್ಯವೇ ಸರ್ವಧರ್ಮ ಸಮಭಾವ, ಪರಸ್ಪರ ಗೌರವ ಮತ್ತು ಸಹಬಾಳ್ವೆಯಾಗಿದೆ. 'ಸರ್ವೇ ಜನಾಃ ಸುಖಿನೋ ಭವಂತು' ಎಂಬ ವಿಶಾಲ ಮಾನವೀಯ ದೃಷ್ಟಿಕೋನವನ್ನು ನಮ್ಮ ಸಂಸ್ಕೃತಿ ಪ್ರತಿಪಾದಿಸಿದೆ ಎಂದು ತಿಳಿಸಿದರು.

ಸಚಿವರ ಹೇಳಿಕೆಯನ್ನು ವಿರೋಧಿಸುವ ನೆಪದಲ್ಲಿ ಮುಸ್ಲಿಂ ಸಮುದಾಯವನ್ನು ಗುರಿಯಾಗಿಸಿಕೊಂಡು ಮಾತನಾಡುವುದು ಕೂಡ ಸರಿಯಲ್ಲ ಎಂದು ಶ್ರೀ ರಂಭಾಪುರಿ ಜಗದ್ಗುರುಗಳು ಸ್ಪಷ್ಟಪಡಿಸಿದರು.

ವಿರೋಧ ಇರಬೇಕಾದುದು ವ್ಯಕ್ತಿಯ ಹೇಳಿಕೆಯ ವಿರುದ್ಧವೇ ಹೊರತು ಯಾವುದೇ ಸಮುದಾಯದ ವಿರುದ್ಧ ಅಲ್ಲ. ಸಮಾಜದಲ್ಲಿ ಶಾಂತಿ, ಸೌಹಾರ್ದತೆ ಹಾಗೂ ಪರಸ್ಪರ ಗೌರವ ಉಳಿಸುವ ಜವಾಬ್ದಾರಿ ಪ್ರತಿಯೊಬ್ಬರ ಮೇಲಿದೆ ಎಂದು ಹೇಳಿದರು.

ಉನ್ನತ ಶಿಕ್ಷಣ ಸಚಿವರಾದ ಬಸವರಾಜ ರಾಯರಡ್ಡಿ ಅವರು ವಿದ್ಯಾರ್ಥಿಗಳು ಹಾಗೂ ಯುವಜನಾಂಗಕ್ಕೆ ಮಾರ್ಗದರ್ಶನ ನೀಡುವ ಮಹತ್ವದ ಸ್ಥಾನದಲ್ಲಿದ್ದಾರೆ. ಆದ್ದರಿಂದ ಅವರ ಸಾರ್ವಜನಿಕ ಹೇಳಿಕೆಗಳು ಸಮಾಜದಲ್ಲಿ ಏಕತೆ, ಶಾಂತಿ ಮತ್ತು ಪರಸ್ಪರ ಗೌರವವನ್ನು ಬೆಳೆಸುವಂತಿರಬೇಕು ಎಂದು ಅಭಿಪ್ರಾಯಪಟ್ಟರು.

ಯಾವುದೇ ಧರ್ಮವನ್ನು ಮತ್ತೊಂದು ಧರ್ಮಕ್ಕಿಂತ ಮೇಲು ಅಥವಾ ಕೀಳು ಎಂದು ನೋಡುವ ಬದಲು ಎಲ್ಲ ಧರ್ಮಗಳಿಗೂ ಸಮಾನ ಗೌರವ ನೀಡುವ ನಿಲುವು ಸ್ಪಷ್ಟವಾಗಬೇಕು. ಅವರವರ ಧರ್ಮ ಅವರಿಗೆ ಶ್ರೇಷ್ಠವಾಗಿದೆ ಎಂದು ಹೇಳಿದರು.

ಹಿಂದೂ ಸಂಸ್ಕೃತಿಯ ಗೌರವವನ್ನು ಎತ್ತಿಹಿಡಿಯುವುದು ಮತ್ತೊಂದು ಧರ್ಮದ ವಿರೋಧವಲ್ಲ. ಅದೇ ರೀತಿ ಇತರ ಧರ್ಮಗಳನ್ನು ಗೌರವಿಸುವುದು ಹಿಂದೂ ಸಂಸ್ಕೃತಿಯನ್ನು ಕೀಳಾಗಿ ಕಾಣುವುದೂ ಅಲ್ಲ ಎಂದು ತಿಳಿಸಿದರು. ಶ್ರೀ ಉಜ್ಜಯಿನಿ, ಶ್ರೀ ಕೇದಾರ, ಶ್ರೀಶೈಲ ಹಾಗೂ ಶ್ರೀ ಕಾಶಿ ಜಗದ್ಗುರುಗಳ ಪರವಾಗಿಯೂ ಈ ಅಭಿಪ್ರಾಯವನ್ನು ವ್ಯಕ್ತಪಡಿಸಿರುವುದಾಗಿ ಶ್ರೀ ರಂಭಾಪುರಿ ಜಗದ್ಗುರುಗಳು ತಿಳಿಸಿದ್ದಾರೆ.

## ತಹಸೀಲ್ದಾರ್ ಕಚೇರಿ ದೂರಕ್ಕೆ ಸ್ಥಳಾಂತರ ಬೇಡ

**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ತಾಲೂಕು ದಂಡಾಧಿಕಾರಿಗಳ (ತಹಸೀಲ್ದಾರ್) ಕಚೇರಿ ಶಿಥಿಲಾವಸ್ಥೆಯಲ್ಲಿರುವ ಹಿನ್ನೆಲೆಯಲ್ಲಿ, ನೂತನ ಕಟ್ಟಡ ನಿರ್ಮಾಣವಾಗುವವರೆಗೆ ಜಿಲ್ಲಾಧಿಕಾರಿ ಕಚೇರಿ ಎದುರಿನ ನಿಸರ್ಗ ಬಡಾವಣೆಯಲ್ಲಿರುವ ಜಿಲ್ಲಾ ಸಾಹಿತ್ಯ ಭವನಕ್ಕೆ ತಾತ್ಕಾಲಿಕವಾಗಿ ಸ್ಥಳಾಂತರಿಸುವ ನಿರ್ಧಾರವನ್ನು ಕೈಬಿಡಬೇಕು ಎಂದು ಶ್ರೀ ಡಾ. ಪಂಡಿತ ಪುಟ್ಟರಾಜ ರೈತ ಸಂಘದ ರಾಜ್ಯ ಗೌರವಾಧ್ಯಕ್ಷ ಶಾಂತಯ್ಯ ಮುತ್ತಿನಪೆಂಡಿಮಠ ಆಗ್ರಹಿಸಿದರು.

ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಗರದ ಹೃದಯಭಾಗದಲ್ಲಿರುವ ಗದಗ ತಾಲೂಕು ತಹಸೀಲ್ದಾರ್ ಕಚೇರಿಯನ್ನು ದೂರದ ಪ್ರದೇಶಕ್ಕೆ ಸ್ಥಳಾಂತರಿಸಿದರೆ ರೈತರು ಹಾಗೂ ಸಾರ್ವಜನಿಕರು ತಮ್ಮ ಕೆಲಸಗಳಿಗಾಗಿ ತೆರಳಲು ತೀವ್ರ ತೊಂದರೆ ಅನುಭವಿಸಬೇಕಾಗುತ್ತದೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ಈಗಾಗಲೇ ಗದಗ ನಗರದಲ್ಲಿ ಸಮರ್ಪಕ ನಗರ ಸಾರಿಗೆ ವ್ಯವಸ್ಥೆ ಇಲ್ಲ. ಇಂತಹ ಸಂದರ್ಭದಲ್ಲಿ ಕಚೇರಿಯನ್ನು ದೂರದ ಪ್ರದೇಶಕ್ಕೆ ಸ್ಥಳಾಂತರಿಸಿದರೆ ಸಾರ್ವಜನಿಕರು ಖಾಸಗಿ ಆಟೋಗಳನ್ನು ಅವಲಂಬಿಸಬೇಕಾಗುತ್ತದೆ. ಇದರಿಂದ ಪ್ರಯಾಣ ವೆಚ್ಚ ಹಾಗೂ ಸಮಯ ಎರಡೂ ಹೆಚ್ಚಲಿದ್ದು, ಗ್ರಾಮೀಣ ಭಾಗದಿಂದ ಬರುವ ರೈತರಿಗೆ ಮತ್ತಷ್ಟು ಹೊರೆಯಾಗಲಿದೆ ಎಂದು ಹೇಳಿದರು.

ಸಾರ್ವಜನಿಕರ ಅನುಕೂಲಕ್ಕಾಗಿ ನಗರದಲ್ಲಿಯೇ ಸಾಕಷ್ಟು ಸರ್ಕಾರಿ ಕಟ್ಟಡಗಳು ಲಭ್ಯವಿದ್ದರೂ ತಹಶೀಲ್ದಾರ್ ಕಚೇರಿಯನ್ನು ದೂರದ ಸ್ಥಳಕ್ಕೆ ಸ್ಥಳಾಂತರಿಸುವ ಅಗತ್ಯವೇನಿದೆ ಎಂದು ಪ್ರಶ್ನಿಸಿದರು.

ಈ ನಿರ್ಧಾರದಿಂದ ಅಧಿಕಾರಿಗಳ ಸ್ವಹಿತಾಸಕ್ತಿ ಮೇಲ್ನೋಟಕ್ಕೆ ಕಂಡುಬರುತ್ತಿದೆ ಎಂದು ಆರೋಪಿಸಿದ ಅವರು, ರೈತರು ಹಾಗೂ ಸಾರ್ವಜನಿಕರ ಹಿತದೃಷ್ಟಿಯಿಂದ ಕೂಡಲೇ ಸ್ಥಳಾಂತರದ ನಿರ್ಧಾರವನ್ನು ಹಿಂಪಡೆದು, ಜನರಿಗೆ ಸುಲಭವಾಗಿ ತಲುಪಬಹುದಾದ ಸ್ಥಳದಲ್ಲಿಯೇ ತಾತ್ಕಾಲಿಕ ಕಚೇರಿ ವ್ಯವಸ್ಥೆ ಮಾಡಬೇಕು ಎಂದು ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಸಂಘದ ರಾಜ್ಯ ಕಾರ್ಯದರ್ಶಿ ಪ್ರಭು ಜುಟ್ಟದ, ದಾವಲಸಾಬ ನಾಗನೂರ, ಶಿವಯೋಗಯ್ಯ ಶಶಿಮಠ, ಅಜಾಜ್ ಧಾ ಹಾಗೂ ವೆಂಕಟೇಶ ಜುಂಜಣಿ ಉಪಸ್ಥಿತರಿದ್ದರು.

## ಐತಿಹಾಸಿಕ ಸಂಪ್ರದಾಯಕ್ಕೆ ಜೀವಂತಿಕೆ | ಶ್ರಾವಣ ಮಂಗಳವಾರದಂದು ಭಕ್ತರಿಂದ ವಿಶೇಷ ಪೂಜೆ

# ತುಂಗಭದ್ರೆಯ ಹೊಳೆಗೆ ತ್ರಿದೇವತೆಗಳ ಭಕ್ತಿಪೂರ್ವಕ ಬೀಳ್ಕೊಡುಗೆ



**ವಿಜಯ ಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಪಟ್ಟಣದ ಐತಿಹಾಸಿಕ ಗ್ರಾಮದೇವತೆ ನರೇಗಲ್ ಶ್ರೀ ದುರುಗಮ್ಮ, ನಗರ ದೇವತೆ ಶ್ರೀ ಗಾಳೆಮ್ಮ ಹಾಗೂ ಕುರದಗಡ್ಡಿ ಮಾರಮ್ಮ ದೇವತೆಗಳನ್ನು ತುಂಗಭದ್ರಾ ನದಿಗೆ ಬೀಳ್ಕೊಡುವ ಕಾರ್ಯಕ್ರಮ ಮಂಗಳವಾರ ಅತ್ಯಂತ ಶ್ರದ್ಧೆ ಮತ್ತು ಭಕ್ತಿಭಾವದಿಂದ ನೆರವೇರಿತು.

1953ರಲ್ಲಿ ತುಂಗಭದ್ರಾ ನದಿಯಲ್ಲಿ ರಾಮನಗರ, ಕುರದಗಡ್ಡಿ, ಅರಳಿಹಳ್ಳಿ, ನಾರಾಯಣದೇವರಕೆರೆ, ವಲ್ಲಭಾಪುರ, ಬಲ್ಲಾಹುಣಿಸಿ, ಮರಿಯಮ್ಮನಹಳ್ಳಿ ಸೇರಿದಂತೆ ಹಲವು ಗ್ರಾಮಗಳು ಮುಳುಗಡೆಯಾಗಿ ಪುನರ್ವಸತಿ ಕಂಡಿದ್ದವು.

ಅದಕ್ಕೂ ಮುನ್ನ ಈ ಗ್ರಾಮಗಳಲ್ಲಿ ನೆಲೆಸಿದ್ದ ಜನರು, ಹೊಳೆ ತುಂಬಿದ ಬಳಿಕ ಶ್ರಾವಣ ಮಾಸದಲ್ಲಿ ಗ್ರಾಮದೇವತೆಗಳನ್ನು ನದಿಗೆ ಬೀಳ್ಕೊಡುವ ಸಂಪ್ರದಾಯವನ್ನು ಆಚರಿಸಿಕೊಂಡು ಬಂದಿದ್ದರು. ಇದೇ ಪದ್ಧತಿ ಇಂದಿಗೂ ಮುಂದುವರಿದಿದೆ.

ನದಿ ತುಂಬಿ ಹರಿಯುವ ಸಂದರ್ಭದಲ್ಲಿ ಜನತೆಗೆ ಒಳಿತಾಗಲಿ, ಸುಖ-ಸಮೃದ್ಧಿ ನೆಲೆಸಲಿ ಎಂದು ಪ್ರಾರ್ಥಿಸಿ, ಪಟ್ಟಣದ ಅಧಿದೇವತೆಗಳಾದ ಗಾಳೆಮ್ಮ, ದುರುಗಮ್ಮ ಹಾಗೂ ಮಾರಮ್ಮ ದೇವತೆಗಳನ್ನು ಭಕ್ತಿಪೂರ್ವಕವಾಗಿ ಬೀಳ್ಕೊಡಲಾಯಿತು.

ತಾಲೂಕಿನ ಅಡವಿ ಆನಂದ ದೇವನಹಳ್ಳಿ, ಬಾಚಿಗೊಂಡನಹಳ್ಳಿ ಸಮೀಪದ ತುಂಗಭದ್ರೆಯ ಹಿನ್ನೀರಿನ ಪ್ರದೇಶದಲ್ಲಿ ಅಂಬಿಗ ಸಮುದಾಯದವರು ವಿಶೇಷ ಪೂಜೆ ಸಲ್ಲಿಸಿ, ಕಣುಕದ ಆರತಿ ನೆರವೇರಿಸಿ ದೇವತೆಗಳನ್ನು ತೆಪ್ಪದ ಮೂಲಕ ಹರಿಯುವ ಹೊಳೆಗೆ ಬಿಡುತ್ತಾರೆ.

ದೇವತೆಗಳು ಸಂಭ್ರಮದಿಂದ ನದಿಯಲ್ಲಿ ಹರಿದು ಸಾಗುತ್ತವೆ ಎಂಬುದು ಈ ಭಾಗದ ಜನರ ಅಚಲ ನಂಬಿಕೆಯಾಗಿದೆ.

ಶ್ರಾವಣ ಮಂಗಳವಾರದ ಅಂಗವಾಗಿ ತ್ರಿದೇವತೆಗಳಿಗೆ ವಿಶೇಷ ಪೂಜೆ ಸಲ್ಲಿಸಿ, ಪಲ್ಲಕ್ಕಿಯಲ್ಲಿ ಪ್ರತಿಷ್ಠಾಪಿಸಿ ಭಕ್ತರು ಕಾಲ್ನಡಿಗೆಯಲ್ಲೇ ಸುಮಾರು 10 ಕಿಲೋಮೀಟರ್ ದೂರ ಮೆರವಣಿಗೆಯಲ್ಲಿ ಸಾಗಿದರು.

ರಾಮನಗರ, ಅರಳಿಹಳ್ಳಿ ಹಾಗೂ ಕುರದಗಡ್ಡಿ ಗ್ರಾಮಗಳ ಭಕ್ತರು ಸಂಭ್ರಮದಿಂದ ಪಾಲ್ಗೊಂಡು ದೇವತೆಗಳ ಕೃಪೆಗೆ ಪಾತ್ರರಾದರು. ಈ ಸಂದರ್ಭದಲ್ಲಿ ಊರಿನ ಪ್ರಮುಖರಾದ ಸಿ.ಎಂ. ರಾಮಣ್ಣ, ಪುರಸಭೆ ಸದಸ್ಯ ಜೋಗಿ ಹನುಮಂತು, ಸೆರಗಾರ್ ಹುಚ್ಚಪ್ಪ, ಹಿರಿಯ ಕುಸ್ತಿಪಟುಗಳಾದ ಮಡಿವಾಳರ ಕೊಟ್ರೇಶ, ರಾಮಚಂದ್ರ, ಕನಕಪ್ಪ, ವಡ್ಡರ ಸೋಮಪ್ಪ, ಬಂಗಾರಿ ಗಾಳಿರಾಜ, ಅರಸೀಕೆರೆ ಹನುಮಂತಪ್ಪ, ಹನುಮೇಶ, ಮಡಿವಾಳರ ಪ್ರಕಾಶ, ಬಡಲಡಿಕಿ ಮಂಜುನಾಥ, ಕಾಟರ ಗಾಳೆಪ್ಪ, ಬಡಿಗೇರ್ ಬಸವರಾಜ, ಪತ್ರಕರ್ತ ಸರ್ದಾರ್ ಯಮನೂರಪ್ಪ, ಸಿ.ಎಂ. ಶ್ರೀನಿವಾಸ್, ಎಸ್.ಎಂ. ಗಂಗಾಧರಯ್ಯ, ಪಾನ್‌ಶಾಪ್ ಪುಟ್ಟಣ್ಣ, ಮಡಿವಾಳರ ಅಶೋಕ್, ಸೆರಗಾರ್ ಪರಶುರಾಮ್, ಆಟೋ ವೀರೇಶ್, ಶಶಿ, ಸರ್ದಾರ್ ಮಹೇಂದ್ರ ಊರಿನ ಯುವಕರು ಹಾಗೂ ರಾಮನಗರ ದೈವಸ್ಥರು ಉಪಸ್ಥಿತರಿದ್ದರು.

## ಶಿರಹಟ್ಟಿಯಲ್ಲಿ 355ನೇ ಆರಾಧನಾ ಮಹೋತ್ಸವದ ಉತ್ತರಾಧನೆ



**ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಪಟ್ಟಣದ ಶ್ರೀ ರಾಘವೇಂದ್ರ ಸ್ವಾಮಿ ಮಠದಲ್ಲಿ ನಡೆದ ಶ್ರೀ ರಾಘವೇಂದ್ರ ಸ್ವಾಮಿಗಳ 355ನೇ ಆರಾಧನಾ ಮಹೋತ್ಸವದ ಉತ್ತರಾಧನೆ ಅಂಗವಾಗಿ ಸೋಮವಾರ ರಾಯರ ರಥೋತ್ಸವ ನೂರಾರು ಭಕ್ತರ ಸಮ್ಮುಖದಲ್ಲಿ ಭಕ್ತಿಪೂರ್ವಕವಾಗಿ ನೆರವೇರಿತು.

ಬೆಳಿಗ್ಗೆ ಸುಪ್ರಭಾತದೊಂದಿಗೆ ಪೂಜಾ ಕೈಂಕರ್ಯಗಳು ಆರಂಭಗೊಂಡವು. ಶ್ರೀ ರಾಘವೇಂದ್ರ ಸ್ತೋತ್ರ, ಅಷ್ಟೋತ್ತರ, ಪಂಚಾಮೃತ ಅಭಿಷೇಕ ಸೇರಿದಂತೆ ವಿವಿಧ ಧಾರ್ಮಿಕ ವಿಧಿವಿಧಾನಗಳು ಜರುಗಿದವು. ಮಧ್ಯಾಹ್ನ 12 ಗಂಟೆಗೆ ರಾಯರ ಪಲ್ಲಕ್ಕಿ ಉತ್ಸವ ನೆರವೇರಿತು. ಬಳಿಕ ಮಧ್ಯಾಹ್ನ 12.30ರ ಸುಮಾರಿಗೆ ನೆರೆದಿದ್ದ ನೂರಾರು ಭಕ್ತರ ಸಮ್ಮುಖದಲ್ಲಿ ಶ್ರೀಮಠದ ಅರ್ಚಕ ನರಸಿಂಹ ಆಚಾರ್ಯ ಮಣ್ಣೂರ ಅವರು ರಥೋತ್ಸವಕ್ಕೆ ಚಾಲನೆ ನೀಡಿದರು. ಭಕ್ತರು ರಾಯರ ನಾಮಸ್ಮರಣೆ ಮಾಡುತ್ತ ಶ್ರೀಮಠದ ಆವರಣದಲ್ಲಿ ಭಕ್ತಿಭಾವ ಮೆರೆದರು.

ಬಳಿಕ ನೈವೇದ್ಯ, ಹಸ್ತೋದಕ, ಮಹಾಮಂಗಳಾರತಿ ಹಾಗೂ ಅನ್ನಸಂತರ್ಪಣೆ ಕಾರ್ಯಕ್ರಮಗಳು ನೆರವೇರಿದವು. ಈ ಸಂದರ್ಭದಲ್ಲಿ ಶ್ರೀ ರಾಘವೇಂದ್ರ ಸ್ವಾಮೀ ಕಮಿಟಿ ಅಧ್ಯಕ್ಷ ಶಶಿಕಾಂತ ಪಾಶ್ಚಾಪೂರ, ವಿನಾಯಕ ಸದರಜೋಶಿ, ಗುರುನಾಥ ಪಾಟೀಲ, ಸಂತೋಷ ಕುಬೇರ, ತಾಲೂಕು ಬ್ರಾಹ್ಮಣ ಸಂಘದ ಅಧ್ಯಕ್ಷ ನರಸಿಂಹ ಕುಲಕರ್ಣಿ, ವಿಲಾಸ ಸೊರಟೂರ, ಡಾ. ವಿಜಯದತ್ತ ಮಂಗಸೂಳಿ, ಜಯತೀರ್ಥ ಕುಲಕರ್ಣಿ, ಆನಂದ ಸೊರಟೂರ, ಸುಧೀರ ಜಮಖಂಡಿ, ಅರುಣ ಸೊರಟೂರ, ಅಮೃತ ಭಾತಖಂಡೆ, ಅನಿಲ ಪಾಶ್ಚಾಪೂರ, ಶ್ರೀನಿವಾಸ ಶಿರಹಟ್ಟಿ, ಶ್ರೀಧರ ಕುಲಕರ್ಣಿ, ಲಚ್ಚಪ್ಪ ಮುಳಗುಂದ, ಉದಯ ಕುಲಕರ್ಣಿ, ಡಾ. ವೇದವ್ಯಾಸ ಮಹಿಷಿ, ವಸಂತ ಪಾಶ್ಚಾಪೂರ, ಅಶೋಕ ಕುಲಕರ್ಣಿ, ರಾಮಣ್ಣ ಅಗ್ನಿಹೋತ್ರಿ, ನಾರಾಯಣ ಅಗ್ನಿಹೋತ್ರಿ, ಸತೀಶ ದೇಶಪಾಂಡೆ, ಗಿರೀಶ ದೇಶಪಾಂಡೆ, ದೀಪು ಸೊರಟೂರ, ವಸಂತ ಬಿಜಾಪೂರ, ಗೌರೀಶ ಕುಬೇರ, ಪ್ರಹ್ಲಾದ ಉಮರ್ಜಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಎಂಟು ದಿನಗಳ ಸಂಸ್ಕೃತ ಸುಭಾಷಿತ ಪಠಣ ಸಂಪನ್ನ

**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾ ಸಂಸ್ಕೃತ ಭಾರತಿಯ ವತಿಯಿಂದ ಶ್ರೀ ಜಗದಂಬಾ ದೇವಸ್ಥಾನದ ಶ್ರೀ ಸಹಸ್ರಾರ್ಜುನ ಸಭಾಭವನದಲ್ಲಿ ಎಂಟು ದಿನಗಳ ಸಂಸ್ಕೃತ ಶ್ಲೋಕ ಹಾಗೂ ಸುಭಾಷಿತ ಪಠಣ ಕಾರ್ಯಕ್ರಮ ಯಶಸ್ವಿಯಾಗಿ ನಡೆಯಿತು. ಸಂಸ್ಕೃತ ಭಾರತಿ ಹಾಗೂ ಎಸ್‌ಎಸ್‌ಕೆ ಶ್ರೀ ಜಗದಂಬಾ ಮಹಿಳಾ ಮಂಡಳದ ಆಶ್ರಯದಲ್ಲಿ ಆ.18ರಿಂದ 24ರವರೆಗೆ ನಡೆದ ಕಾರ್ಯಕ್ರಮಕ್ಕೆ ಜ್ಯೋತಿ ಬೆಳಗಿಸುವ ಮೂಲಕ ಚಾಲನೆ ನೀಡಲಾಯಿತು. ತೋಂಟದಾರ್ಯ ಸಂಸ್ಕೃತ ಶಾಲೆಯ ಮುಖ್ಯೋಪಾಧ್ಯಾಯ ಎಸ್.ಎನ್. ಶಿಂಪಿಗೇರ ಉಪಸ್ಥಿತರಿದ್ದರು.

ಮಹಿಳಾ ಮಂಡಳದ ಸಹ ಕಾರ್ಯದರ್ಶಿ ಸುಮನ್ ಆರ್. ಖಟವಟೆ ಅವರು ಎಂಟು ದಿನಗಳ ಕಾಲ ಮಕ್ಕಳು ಹಾಗೂ ಮಹಿಳೆಯರಿಗೆ ಸುಭಾಷಿತಗಳನ್ನು ಕಲಿಸಿದರು. ದೈವಜ್ಞ ಸಮಾಜದ ಮಹಿಳೆಯರಿಂದ ಶ್ಲೋಕ ಪಠಣ ನಡೆಯಿತು. ಮಹಿಳಾ ಮಂಡಳದ ಅಧ್ಯಕ್ಷೆ ಸ್ನೇಹಲತಾ ಕಬಾಡಿ ಅವರು ರಾಖಿ ತಯಾರಿಸುವ ವಿಧಾನವನ್ನು ತಿಳಿಸಿಕೊಟ್ಟರು. ಆ.25ರಂದು ನಡೆದ ಸಮಾರೋಪ ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ವಿನೋದ್ ಸಿದ್ದಲಿಂಗ ಅವರು, ಶ್ಲೋಕಗಳ ಅರ್ಥ ತಿಳಿಯಲು ಸಂಸ್ಕೃತ ಕಲಿಯುವುದು ಅಗತ್ಯ ಎಂದರು. ಚೇರ್ಮನ್ ಪರಶುರಾಮಸಾ ಬದಿ ಹಾಗೂ ಸ್ನೇಹಲತಾ ಕಬಾಡಿ ಅವರು ಸಂಸ್ಕೃತ ಭಾಷೆಯನ್ನು ಉಳಿಸಿ ಬೆಳೆಸುವಂತೆ ಕರೆ ನೀಡಿದರು. ಸಂಸ್ಕೃತ ಭಾರತಿ ಜಿಲ್ಲಾ ಸಂಯೋಜಕ ಎಸ್.ಎನ್. ಶಿಂಪಿಗೇರ, ಉಪನ್ಯಾಸಕ ಪ್ರಶಾಂತ ಪಾಟೀಲ ಮಾತನಾಡಿದರು. ತೋಂಟದಾರ್ಯ ಸಂಸ್ಕೃತ ಪಾಠಶಾಲೆಯ ವಿದ್ಯಾರ್ಥಿನಿಯರಿಂದ ಸಮೂಹ ನೃತ್ಯ ಜರುಗಿತು.ರೇಖಾ ಮಡಿವಾಳರ ಕಾರ್ಯಕ್ರಮ ನಿರೂಪಿಸಿದರು. ಕಸ್ತೂರ ಬಾಯಿ ಭಾಂಡಗೆ ವಂದಿಸಿದರು. ಶಾಂತಿ ಮಂತ್ರದೊಂದಿಗೆ ಕಾರ್ಯಕ್ರಮ ಸಂಪನ್ನಗೊಂಡಿತು.



## ಲಿಂ. ಡಾ. ಎಸ್.ಎಫ್. ಹಿರೇಮಠ ಸ್ಮರಣಾರ್ಥ ರಕ್ತದಾನ, ಉಚಿತ ವೈದ್ಯಕೀಯ ಶಿಬಿರ

# ನಾಡಿಮಿಡಿತದಿಂದಲೇ ರೋಗ ಪತ್ತೆಹಚ್ಚಿ ಗುಣಪಡಿಸುತ್ತಿದ್ದರು



**ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಶಿರಹಟ್ಟಿ ತಾಲೂಕಿನ ಬನ್ನಿಕೊಪ್ಪದ ಲಿಂ. ಡಾ. ಎಸ್. ಎಫ್. ಹಿರೇಮಠ ಅವರು ರೋಗಿಗಳ ನಾಡಿಮಿಡಿತದಿಂದಲೇ ರೋಗವನ್ನು ಪತ್ತೆಹಚ್ಚಿ ಚಿಕಿತ್ಸೆ ನೀಡುವ ಅಪರೂಪದ ಕಲೆ ಹೊಂದಿದ್ದರು. ವಿಷಜಂತುಗಳ ಕಡಿತಕ್ಕೊಳಗಾದ ರೋಗಿಗಳನ್ನೂ ಗುಣಪಡಿಸುತ್ತಿದ್ದ ಅವರು ಈ ಭಾಗದ ನಡೆದಾಡುವ ವೈದ್ಯ ದೇವರೆಂದೇ ಪ್ರಖ್ಯಾತಿ ಹೊಂದಿದ್ದರು ಎಂದು ಬನ್ನಿಕೊಪ್ಪದ ಬೃಹನ್ಮಠ ಹಾಗೂ ಮೈಸೂರಿನ ಜಪದಕಟ್ಟೆ ಅರಮನೆಯ ಡಾ. ಸುಜ್ಞಾನದೇವ ಶಿವಾಚಾರ್ಯ ಸ್ವಾಮೀಜಿ ಹೇಳಿದರು.

ಅವರು ಶಿರಹಟ್ಟಿ ತಾಲೂಕಿನ ಬನ್ನಿಕೊಪ್ಪ ಗ್ರಾಮದಲ್ಲಿ ಲಿಂ. ಡಾ. ಎಸ್.ಎಫ್. ಹಿರೇಮಠ ಅವರ ಸ್ಮರಣಾರ್ಥ ಹಮ್ಮಿಕೊಂಡಿದ್ದ ರಕ್ತದಾನ ಹಾಗೂ ಉಚಿತ ವೈದ್ಯಕೀಯ ಶಿಬಿರ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಪ್ರತಿ ವರ್ಷವೂ ಇಂತಹ ಸಮಾಜಮುಖಿ ಕಾರ್ಯಕ್ರಮಗಳನ್ನು ಆಯೋಜಿಸುತ್ತಾ ಬರಲಾಗುತ್ತಿದೆ. ಸುತ್ತಮುತ್ತಲಿನ ಗ್ರಾಮೀಣ ಪ್ರದೇಶದ ಜನರ ಆರೋಗ್ಯದ ಹಿತದೃಷ್ಟಿಯಿಂದ ಉಚಿತ ಆರೋಗ್ಯ ಶಿಬಿರಗಳನ್ನು ನಡೆಸುವ ಮೂಲಕ ಲಿಂ. ಡಾ. ಹಿರೇಮಠ ಅವರಿಗೆ ಗೌರವ ಸಲ್ಲಿಸುವ ಕಾರ್ಯ ಮಾಡಲಾಗುತ್ತಿದೆ ಎಂದರು.

ಕಾರ್ಯಕ್ರಮದಲ್ಲಿ ವಿರುಪಾಪುರದ ಸ್ವಾಮೀಜಿ ಹಾಗೂ ಬೆಳ್ಳಟ್ಟಿಯ ಬಸವರಾಜ ಸ್ವಾಮೀಜಿ ಸಾನ್ನಿಧ್ಯ ವಹಿಸಿದ್ದರು.

ಶಾಸಕ ಡಾ. ಚಂದ್ರು ಲಮಾಣಿ, ಶಿವಪ್ರಕಾಶ ಮಹಾಜನಶೆಟ್ಟರ, ಕೊಟ್ರಯ್ಯ ಹೊಂಬಾಳಿಮಠ, ಬಾಬಣ್ಣ ಕಲಾಲ, ಜಂಬಯ್ಯ ಹಿರೇಮಠ, ವೈ.ಬಿ. ಹೊಸೂರ, ಆರ್.ಆರ್. ಗಡ್ಡದ್ದೇವರಮಠ, ಡಾ. ಪ್ರಕಾಶ ಹೊಸಮನಿ, ಡಾ. ಶಂಭು ಪುರದ, ಡಾ. ಪ್ರಭುಗೌಡರ, ತಿಮ್ಮರಡ್ಡಿ ಮರಡ್ಡಿ, ಮೋಹನ ಗುತ್ತೆಮ್ಮನವರ, ಮಹೇಶ ಬಡ್ನಿ, ಶಂಕರ ಮೇಟಿ, ಶಂಭು ಮಠದ, ಎಂ.ಸಿ. ಮರಡೂರಮಠ, ಅಶೋಕ ಹಿರೇಹೊಳಿ, ಗಿರೀಶ ಕೊಡಬಾಳ, ಅಶೋಕ ನಾವಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

> ಲಿಂ. ಡಾ. ಎಸ್.ಎಫ್. ಹಿರೇಮಠ ಅವರು ಹೊಂದಿದ್ದ ವೈದ್ಯಕೀಯ ಸೇವಾ ಮನೋಭಾವ ಮತ್ತು ಅಪರೂಪದ ಚಿಕಿತ್ಸಾ ಕಲೆ ಇಂದಿನ ಪೀಳಿಗೆಗೆ ಆದರ್ಶವಾಗಿದೆ. ಅವರ ಸ್ಮರಣಾರ್ಥ ಸಮಾಜಮುಖಿ ಕಾರ್ಯಕ್ರಮಗಳನ್ನು ಆಯೋಜಿಸುವುದು ಅವರಿಗೆ ಸಲ್ಲಿಸುವ ನಿಜವಾದ ಗೌರವವಾಗಿದೆ.
> - ಡಾ. ಸುಜ್ಞಾನದೇವ ಶಿವಾಚಾರ್ಯ ಸ್ವಾಮೀಜಿ

# ಬರ ಪರಿಶೀಲನೆ ಆಗಮಿಸಿದ್ದ ಡಿಕೆಶಿಗೆ ಕ್ವಿಂಟಲ್‌ಗೂ ಹೆಚ್ಚು ತೂಕದ ಸೇಬಿನ ಮಾಲೆ, ಅದ್ದೂರಿ ಸ್ವಾಗತ!



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಮಂಗಳವಾರ ಬರ ಪರಿಸ್ಥಿತಿ ಪರಿಶೀಲನೆ ಹಾಗೂ ಜಿಲ್ಲಾಮಟ್ಟದ ಅಧಿಕಾರಿಗಳ ಸಭೆ ಮುಗಿಸಿದ ಬಳಿಕ ಹೆಲಿಕಾಪ್ಟರ್ ಮೂಲಕ ಲಕ್ಷ್ಮೇಶ್ವರಕ್ಕೆ ಆಗಮಿಸಿ ರೈತರು ಹಾಗೂ ಸಾರ್ವಜನಿಕರಿಂದ ಮನವಿಗಳನ್ನು ಸ್ವೀಕರಿಸಿದರು. ಬಳಿಕ ಕಾರಿನಲ್ಲಿ ಮುಕ್ತಿಮಂದಿರ ಧರ್ಮಕ್ಷೇತ್ರಕ್ಕೆ ತೆರಳಿ ಲಿಂಗೈಕ್ಯ ಜಗದ್ಗುರು ವೀರಗಂಗಾಧರ ಶ್ರೀಗಳ ಅಜ್ಜಯ್ಯನ ಕೃತ್ಯ ಗದ್ದುಗೆಗೆ ಪೂಜೆ ಸಲ್ಲಿಸಿದರು.

ಮುಖ್ಯಮಂತ್ರಿಯಾಗಿ ಇದೇ ಮೊದಲ ಬಾರಿಗೆ ಲಕ್ಷ್ಮೇಶ್ವರಕ್ಕೆ ಆಗಮಿಸಿದ ಡಿ.ಕೆ. ಶಿವಕುಮಾರ್ ಅವರಿಗೆ ಶಿಗ್ಲಿ ನಾಕಾದಲ್ಲಿ ಕಾಂಗ್ರೆಸ್‌ನ ಅಪಾರ ಸಂಖ್ಯೆಯ ನಾಯಕರು, ಕಾರ್ಯಕರ್ತರು ಹಾಗೂ ಅಭಿಮಾನಿಗಳು ಅದ್ದೂರಿಯಾಗಿ ಸ್ವಾಗತ ಕೋರಿದರು.

### ಕ್ರೇನ್ ಮೂಲಕ ಸೇಬಿನ ಮಾಲೆ!

ಡಿ.ಕೆ. ಶಿವಕುಮಾರ್ ಅವರ ಸ್ವಾಗತಕ್ಕಾಗಿ ಕಾರ್ಯಕರ್ತರು 1 ಕ್ವಿಂಟಲ್ 25 ಕೆಜಿ ತೂಕದ ಬೃಹತ್ ಸೇಬಿನ ಹಣ್ಣಿನ ಮಾಲೆಯನ್ನು ಸಿದ್ಧಪಡಿಸಿದ್ದರು. ಕ್ರೇನ್ ಮೂಲಕ ಬೃಹತ್ ಮಾಲೆಯನ್ನು ಹಾಕಿ ಕಾರ್ಯಕರ್ತರು ತಮ್ಮ ಅಭಿಮಾನ ಮೆರೆದರು. ಈ ವೇಳೆ ಗೃಹಲಕ್ಷ್ಮಿ ಯೋಜನೆಯ ಫಲಾನುಭವಿಗಳು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಆರತಿ ಮೂಲಕ ಸ್ವಾಗತಿಸಿದರು.

ಲಕ್ಷ್ಮೇಶ್ವರ ಬ್ಲಾಕ್ ಕಾಂಗ್ರೆಸ್ ವತಿಯಿಂದಲೂ ತಾಲೂಕನ್ನು ಬರಪೀಡಿತ ಎಂದು ಘೋಷಿಸುವಂತೆ ಮುಖ್ಯಮಂತ್ರಿಗೆ ಮನವಿ ಸಲ್ಲಿಸಲಾಯಿತು.


ರೈತರು ಸೇರಿದಂತೆ ಸಾರ್ವಜನಿಕರಿಂದ ವಿವಿಧ ಮನವಿಗಳನ್ನು ಸ್ವೀಕರಿಸಿದ ಮುಖ್ಯ ಮಂತ್ರಿ, ಅವರ ಸಮಸ್ಯೆಗಳನ್ನು ಆಲಿಸಿದರು.

ಬಳಿಕ ಮುಕ್ತಿಮಂದಿರ ಧರ್ಮಕ್ಷೇತ್ರದತ್ತ ಪ್ರಯಾಣ ಬೆಳೆಸಿದರು.

ಮುಖ್ಯಮಂತ್ರಿಗಳ ಆಗಮನದ ಹಿನ್ನೆಲೆಯಲ್ಲಿ ಶಿಗ್ಲಿ ನಾಕಾದಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಜಮಾಯಿಸಿದ್ದರು.

ಈ ವೇಳೆ ಜಿ.ಎಸ್. ಗಡ್ಡೆದೇವರಮಠ, ರಾಮಣ್ಣ ಲಮಾಣಿ, ರಾಮಕೃಷ್ಣ ದೊಡ್ಡಮನಿ, ಆನಂದ ಗಡ್ಡೆದೇವರಮಠ, ಚನ್ನಪ್ಪ ಜಗಲಿ, ಸೋಮಣ್ಣ ಬೆಟಗೇರಿ, ಪದ್ಮರಾಜ ಪಾಟೀಲ, ಜಿ.ಆರ್. ಕೊಪ್ಪದ, ಮಹೇಶ ಲಮಾಣಿ, ದೀಪಕ ಲಮಾಣಿ, ಮಂಜುನಾಥ ಶೆರಸೂರಿ, ಮುದಕಣ್ಣ ಗದ್ದಿ, ಯಲ್ಲಪ್ಪ ಹಂಜಿ, ನೀಲಪ್ಪ ಶೆರಸೂರಿ, ಶರಣು ಗೋಡಿ, ಯಲ್ಲಪ್ಪ ತಳವಾರ, ಗೋವಿಂದಗೌಡ ಪಾಟೀಲ, ಅಫಜಲ್‌ಖಾನ್ ರಿತ್ತಿ, ವಿರೇಂದ್ರಗೌಡ ಪಾಟೀಲ, ಮುತ್ತಣ್ಣ ಗಡೆಪ್ಪನವರ, ಶಿದ್ದು ಪೂಜಾರ, ಭರತ ಬಳಿಗಾರ, ಮಂಜಣ್ಣ ಶೆರಸೂರಿ, ರಾಮಣ್ಣ ರಿತ್ತಿ, ಅಣ್ಣಪ್ಪ ರಾಮಗೇರಿ, ಬಸವರೆಡ್ಡಿ ಹನುಮರೆಡ್ಡಿ, ಕೊಟೆಪ್ಪ ವರ್ದಿ, ನೀಲಪ್ಪ ಪಡಗೇರಿ, ರಾಜು ಕುರಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಪಪಂಗೆ ನೂತನ ಕಾರ್ಯಾಲಯ ನಿರ್ಮಿಸಲು ಆಗ್ರಹಿಸಿ ಮನವಿ



**ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಪಟ್ಟಣ ಪಂಚಾಯಿತಿಗೆ ನೂತನ ಕಾರ್ಯಾಲಯ ನಿರ್ಮಿಸಬೇಕು ಎಂದು ಆಗ್ರಹಿಸಿ ಕರ್ನಾಟಕ ಪ್ರಜಾಪರ ವೇದಿಕೆ ವತಿಯಿಂದ ಮಂಗಳವಾರ ತಹಶೀಲ್ದಾರ ಕೆ. ರಾಘವೇಂದ್ರ ರಾವ್ ಅವರ ಮೂಲಕ ಪೌರಾಡಳಿತ ಸಚಿವರಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ವೇದಿಕೆಯ ತಾಲೂಕು ಅಧ್ಯಕ್ಷ ಹಸನ ತಹಶೀಲ್ದಾರ, ಅಜ್ಜಪ್ಪ ಬಿಢವೆ, ಶರೀಫ ಗುಡಿಮನಿ, ಶಿವಾನಂದ ಸುಲ್ತಾನಪೂರ, ಮಂಜುನಾಥ ಲಮಾಣಿ, ಎಂ.ಎನ್. ಮೂರಶಿಳ್ಳಿ, ಸಾಧಿಕ ಮುಳಗುಂದ, ಮಂಜುನಾಥ ಪೂಜಾರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

### ದಾಖಲೆಗಳ ಹೊಂದಾಣಿಕೆ ಕೊರತೆ ಬೆಳಕಿಗೆ | ಸಾಮಾಜಿಕ ಪರಿಶೋಧನೆ ಗ್ರಾಮಸಭೆಯಲ್ಲಿ ಮಾಹಿತಿ

# ಮನೇರೆಗಾ ಕಾಮಗಾರಿಯಲ್ಲಿ ರೂ.37.63 ಲಕ್ಷ ಆಕ್ಷೇಪಣೆ!



**ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

ಕಳೆದ 2025-26ನೇ ಸಾಲಿನಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ಕೈಗೊಂಡ ವಿವಿಧ ಕಾಮಗಾರಿಗಳಲ್ಲಿ ದಾಖಲೆಗಳ ಹೊಂದಾಣಿಕೆ ಇಲ್ಲದಿರುವುದು ಸೇರಿದಂತೆ ಹಲವು ಕಾರಣಗಳಿಂದ ರೂ.37.63 ಲಕ್ಷ ಮೊತ್ತವನ್ನು ಆಕ್ಷೇಪಣೆಗೆ ಒಳಪಡಿಸಲಾಗಿದೆ ಎಂದು ಮನೇರೆಗಾ ತಾಲೂಕು ಸಂಪನ್ಮೂಲ ವ್ಯಕ್ತಿ ಸಂತೋಷ ಪಾಟೀಲ ತಿಳಿಸಿದರು.

ಲಕ್ಕುಂಡಿ ಗ್ರಾಮ ಪಂಚಾಯಿತಿ ವತಿಯಿಂದ ಇಲ್ಲಿನ ದುರ್ಗಾದೇವಿ ಸಮುದಾಯ ಭವನದಲ್ಲಿ ನಡೆದ 2025-26ನೇ ಸಾಲಿನ ಮನೇರೆಗಾ ಯೋಜನೆ ಹಾಗೂ 15ನೇ ಹಣಕಾಸು ಯೋಜನೆಯ ಸಾಮಾಜಿಕ ಪರಿಶೋಧನೆ ಗ್ರಾಮಸಭೆಯಲ್ಲಿ ಅವರು ಈ ಮಾಹಿತಿ ನೀಡಿದರು.

ದನದ ದೊಡ್ಡಿ, ಮನೆ ನಿರ್ಮಾಣ, ಬದು ನಿರ್ಮಾಣ, ಅರಣ್ಯೀಕರಣ, ಸಿ.ಸಿ. ರಸ್ತೆ, ಗಟಾರು ನಿರ್ಮಾಣ, ಶಾಲಾ ಆಟದ ಮೈದಾನ ಸೇರಿದಂತೆ ವಿವಿಧ ಕಾಮಗಾರಿಗಳಿಗೆ ರೂ.1,09,41,249 ಕೂಲಿ ಮೊತ್ತ ಹಾಗೂ ರೂ.13,77,322 ಸಾಮಗ್ರಿ ಮೊತ್ತ ಸೇರಿ ಒಟ್ಟು ರೂ.1,23,18,571 ವೆಚ್ಚ ಮಾಡಲಾಗಿದೆ ಎಂದು ವಿವರಿಸಿದರು.

ಕಾಮಗಾರಿಗಳ ಅಳತೆ ಪುಸ್ತಕಗಳಿಗೆ ಚೆಕ್ ಮೆಷರ್‌ಮೆಂಟ್ ಇಲ್ಲದಿರುವುದು, ಬಿಲ್‌ಗಳಲ್ಲಿ ಪೂರೈಕೆದಾರರ ಸಹಿ ಇಲ್ಲದಿರುವುದು, ಕೆಟಿಟಿಪಿ ನಿಯಮಗಳನ್ನು ಪಾಲಿಸದಿರುವುದು ಹಾಗೂ ಅರಣ್ಯ ಇಲಾಖೆ ಕಾಮಗಾರಿಗಳಿಗೆ ನೀರು ಹಾಕಿರುವ ಕುರಿತು ಛಾಯಾಚಿತ್ರಗಳಿಲ್ಲದಿರುವುದು ಸೇರಿದಂತೆ ವಿವಿಧ ಕಾರಣಗಳಿಂದ ರೂ.37,63,841 ಮೊತ್ತವನ್ನು ಆಕ್ಷೇಪಣೆಗೆ ಒಳಪಡಿಸಲಾಗಿದೆ ಎಂದು ತಿಳಿಸಿದರು.

15ನೇ ಹಣಕಾಸು ಯೋಜನೆಯಡಿ ಕುಡಿಯುವ ನೀರು, ಬೀದಿ ದೀಪ, ಶಾಲಾ ಮೈದಾನ, ಗಟಾರು, ಹೈಮಾಸ್ಟ್, ಸ್ವಚ್ಛತೆ ಸೇರಿದಂತೆ 11 ಕಾಮಗಾರಿಗಳಿಗೆ ರೂ.50,23,098 ವೆಚ್ಚ ಮಾಡಲಾಗಿದೆ. ಈ ಪೈಕಿ ರೂ.59,674 ತೆರಿಗೆ ಭರಣ ಮಾಡಿಲ್ಲ ಎಂದು ಸಭೆಗೆ ತಿಳಿಸಲಾಯಿತು.

ಗ್ರಾಮಸಭೆಯಲ್ಲಿ ಆಕ್ರೋಶ ವ್ಯಕ್ತಪಡಿಸಿದ ಗ್ರಾಮ ಪಂಚಾಯಿತಿ ಮಾಜಿ ಸದಸ್ಯ ಕುಬೇರಪ್ಪ ಬೆಂತೂರು, ಕಳೆದ ಎರಡು-ಮೂರು ವರ್ಷಗಳಿಂದ ಸಾಮಾಜಿಕ ಪರಿಶೋಧನೆಯಲ್ಲಿ ವಿವಿಧ ಕಾಮಗಾರಿಗಳ ಲಕ್ಷಾಂತರ ರೂಪಾಯಿ ಮೊತ್ತವನ್ನು ಆಕ್ಷೇಪಣೆಗೆ ಒಳಪಡಿಸಲಾಗುತ್ತಿದೆ. ಆದರೆ ಆಕ್ಷೇಪಣೆಗೆ ಒಳಪಟ್ಟ ಹಣದ ವಸೂಲಾತಿ ಆಗಿದೆಯೇ ಅಥವಾ ಇಲ್ಲವೇ ಎಂಬ ಬಗ್ಗೆ ಅಧಿಕಾರಿಗಳು ಗ್ರಾಮಸಭೆಗೆ ಮಾಹಿತಿ ನೀಡುವುದಿಲ್ಲ. ಇದರಿಂದ ಗ್ರಾಮಸ್ಥರಿಗೆ ಸರಿಯಾದ ಮಾಹಿತಿ ದೊರೆಯದೆ ಚರ್ಚೆ ಮುಗಿದುಹೋಗುತ್ತದೆ ಎಂದು ದೂರಿದರು.

ಲಕ್ಷ ರೂಪಾಯಿ ಮೀರಿದ ಕಾಮಗಾರಿಗಳನ್ನು ಟೆಂಡರ್ ಕರೆಯದೆ ನಡೆಸಲಾಗುತ್ತಿದೆ ಎಂದು ಆರೋಪಿಸಿದ ಅವರು, ಪ್ರಸ್ತುತ ನಡೆಯುತ್ತಿರುವ ವಿಬಿಜಿ ರಾಮ್‌ಜಿ ಕಾಮಗಾರಿಗಳಲ್ಲಿ ವಿಕಲಚೇತನರನ್ನು ಕೂಲಿ ಕೆಲಸಕ್ಕೆ ತೆಗೆದುಕೊಳ್ಳದಿರುವ ಬಗ್ಗೆಯೂ ಅಸಮಾಧಾನ ವ್ಯಕ್ತಪಡಿಸಿದರು.

ಎಂಕೆಬಿಎಸ್ ಶಾಲೆಯಲ್ಲಿ ಶೌಚಾಲಯ ನಿರ್ಮಾಣ, ಶಾಲಾ ಮೈದಾನದಲ್ಲಿರುವ ತೆರೆದ ಬಾವಿಗೆ ಮುಚ್ಚಳ ಅಳವಡಿಕೆ ಸೇರಿದಂತೆ ಇತರ ಅಭಿವೃದ್ಧಿ ಕಾಮಗಾರಿಗಳ ಕುರಿತು ಸಾಕಷ್ಟು ಬಾರಿ ತಿಳಿಸಿದರೂ ಕಾಳಜಿ ವಹಿಸಿಲ್ಲ ಎಂದು ಗ್ರಾಮಸ್ಥರು ದೂರಿದರು.

ಕಳೆದ ವರ್ಷದ ಉದ್ಯೋಗ ಖಾತ್ರಿ ಯೋಜನೆಯ ಆಕ್ಷೇಪಣೆ ಹಣದ ವಸೂಲಾತಿ ಕುರಿತು ಗ್ರಾಮಸಭೆಯಲ್ಲಿ ಚರ್ಚೆಯಾಗದಿರುವ ಬಗ್ಗೆ ನಾಗಮ್ಮ ಹಾಲಿನವರ ಆಕ್ರೋಶ ವ್ಯಕ್ತಪಡಿಸಿದರು. ಈ ಕುರಿತು ಕ್ರಿಯಾ ಯೋಜನೆ ರೂಪಿಸಲಾಗಿದೆ ಎಂದು ಪಿಡಿಒ ಉತ್ತರಿಸಿದರು.

ಪ್ರಸ್ತುತ ಆರಂಭವಾಗಿರುವ ಕಾಮಗಾರಿ ಸ್ಥಳಗಳು ದೂರದಲ್ಲಿದ್ದು, ಕೆಲಸದ ಸ್ಥಳಕ್ಕೆ ತೆರಳಲು ಹೆಚ್ಚಿನ ಸಮಯ ಬೇಕಾಗುತ್ತಿದೆ. ಆದ್ದರಿಂದ ಕಾರ್ಮಿಕರಿಗೆ ಸಾರಿಗೆ ವ್ಯವಸ್ಥೆ ಕಲ್ಪಿಸಬೇಕು ಎಂದು ಕೂಲಿ ಕಾರ್ಮಿಕರು ಗ್ರಾಮಸಭೆಯಲ್ಲಿ ಒತ್ತಾಯಿಸಿದರು. ಸತತವಾಗಿ 125 ದಿನಗಳ ಕೆಲಸ ನೀಡಬೇಕು, ಕೆಲಸದ ಸ್ಥಳಕ್ಕೆ ಕುಡಿಯುವ ನೀರಿನ ವ್ಯವಸ್ಥೆ ಮಾಡಬೇಕು, ಕೂಲಿ ಮೊತ್ತವನ್ನು ಶೀಘ್ರ ಪಾವತಿಸಬೇಕು ಹಾಗೂ ಆರೋಗ್ಯ ಕಿಟ್ ವಿತರಿಸಬೇಕು ಎಂದು ಕಾರ್ಮಿಕರು ಆಗ್ರಹಿಸಿದರು.

ಇದಕ್ಕೆ ಸ್ಪಂದಿಸಿದ ಪಿಡಿಒ ಅಮೀರನಾಯಕ, ಸಾರಿಗೆ ವ್ಯವಸ್ಥೆ ಕಲ್ಪಿಸುವ ಕುರಿತು ಯಾವುದೇ ಆದೇಶ ಬಂದಿಲ್ಲ. ಆದರೆ ಕೆಲಸದ ಸ್ಥಳಗಳಿಗೆ 20 ಕ್ಯಾನ್ ಕುಡಿಯುವ ನೀರು ಪೂರೈಸಲು ಕ್ರಮ ಕೈಗೊಳ್ಳಲಾಗುವುದು ಎಂದರು.

ಜಿಲ್ಲೆಯಲ್ಲಿಯೇ ಪ್ರಥಮ ಬಾರಿಗೆ ಲಕ್ಕುಂಡಿಯಲ್ಲಿ ವಿಬಿಜಿ ರಾಮ್‌ಜಿ ಕಾಮಗಾರಿ ಆರಂಭಿಸಲಾಗಿದ್ದು, ಕಾರ್ಮಿಕರಿಗೆ ಹೆಚ್ಚಿನ ಉದ್ಯೋಗಾವಕಾಶ ಕಲ್ಪಿಸಲು ಕ್ರಮ ವಹಿಸಲಾಗುವುದು ಎಂದು ತಿಳಿಸಿದರು.

ನೋಡಲ್ ಅಧಿಕಾರಿಯಾಗಿ ಆಗಮಿಸಿದ್ದ ಗ್ರಾಮೀಣ ಕ್ಷೇತ್ರ ಸಮನ್ವಯಾಧಿಕಾರಿ ಜೆ.ಎ. ಭಾವಿಕಟ್ಟಿ ಮಾತನಾಡಿದರು. ಆಡಳಿತಾಧಿಕಾರಿ ಶಿವಕುಮಾರ ವಾಲಿ, ತಾಂತ್ರಿಕ ಸಹಾಯಕ ವಿಜಯ ಅಬ್ಬಿಗೇರಿ, ಸಾಮಾಜಿಕ ಪರಿಶೋಧನೆ ತಂಡದ ವಸಂತ ಹಾದಿಮನಿ, ಮಲ್ಲಪ್ಪ ಜಿನಗಿ, ಮೈಲಾರಪ್ಪ ಹುಯಿಲಗೋಳ, ಮಂಜುನಾಥ ಹುಡೇದ ಸೇರಿದಂತೆ ಇತರರು ಸಭೆಯಲ್ಲಿ ಉಪಸ್ಥಿತರಿದ್ದರು.

### ಅಖಿಲ ಭಾರತ ಜಂಗಮ ಸೇವಾ ಸಮಿತಿ ಪದಾಧಿಕಾರಿಗಳ ಪದಗ್ರಹಣ, 'ಜಂಗಮಶ್ರೀ' ಪ್ರಶಸ್ತಿ ಪ್ರದಾನ

# ಸಮಾಜವನ್ನು ತಿದ್ದಿ ಮಾರ್ಗದರ್ಶನ ನೀಡುವವರು ಜಂಗಮರು



**ವಿಜಯಸಾಕ್ಷಿ ಸುದ್ದಿ, ಗದಗ**

ಹಿಂಡಾಗಿರುವ ಗುಂಪಿಗೆ ಸಮಾಜ ಎನ್ನಲಾಗದು. ಸಂಸ್ಕಾರ ಹಾಗೂ ಧರ್ಮಾಚರಣೆ ಇರುವ ಸಮುದಾಯವೇ ನಿಜವಾದ ಸಮಾಜವಾಗಿದ್ದು, ಸಮಾಜವನ್ನು ತಿದ್ದಿ ಸರಿಯಾದ ಮಾರ್ಗದಲ್ಲಿ ಮುನ್ನಡೆಸುವ ಜವಾಬ್ದಾರಿ ಜಂಗಮರ ಮೇಲಿದೆ ಎಂದು ನರೇಗಲ್‌ನ ಪೂಜ್ಯಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯ ಸ್ವಾಮಿಗಳು ಹೇಳಿದರು.

ನಗರದ ಕೆಎಸ್‌ಆರ್‌ಟಿಸಿ ಡಿಪೋ ಹಿಂಭಾಗದಲ್ಲಿರುವ ಶ್ರೀ ಕುಮಾರೇಶ್ವರ ಧಾರ್ಮಿಕ ಪಾಠಶಾಲೆಯಲ್ಲಿ ರವಿವಾರ ಅಖಿಲ ಭಾರತ ಜಂಗಮ ಸೇವಾ ಸಮಿತಿ ಗದಗ ಹಾಗೂ ಪಂಚವಟಿ ಧಾರ್ಮಿಕ ಗುರುಕುಲ ಜನಕಲ್ಯಾಣ ಟ್ರಸ್ಟ್, ನರಸಾಪುರ-ಗದಗ ಇವರ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ಪದಾಧಿಕಾರಿಗಳ ಪದಗ್ರಹಣ, ಸಮಿತಿಯ ವಾರ್ಷಿಕೋತ್ಸವ, 'ಜಂಗಮಶ್ರೀ' ಪ್ರಶಸ್ತಿ ಪ್ರದಾನ ಹಾಗೂ ಉಡಿ ತುಂಬುವ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಜಂಗಮ ಸಮಾಜ ಶೈಕ್ಷಣಿಕ, ಧಾರ್ಮಿಕ ಹಾಗೂ ರಾಜಕೀಯವಾಗಿ ಹಿಂದುಳಿದಿಲ್ಲವಾದರೂ ಆರ್ಥಿಕವಾಗಿ ಹಿಂದುಳಿದಿದೆ. ದುಶ್ಚಟಗಳಿಂದ ಸಮಾಜ ಹಾಳಾಗುತ್ತಿದ್ದು, ವ್ಯಸನಮುಕ್ತ ಸಮಾಜ ನಿರ್ಮಾಣಕ್ಕೆ ಎಲ್ಲರೂ ಮುಂದಾಗಬೇಕು. ಹಳ್ಳಿಗಳಲ್ಲಿರುವ ಹಳೆಯ ಮಠಗಳನ್ನು ಅಭಿವೃದ್ಧಿಪಡಿಸಿ ಧಾರ್ಮಿಕ ಆಚರಣೆಗಳನ್ನು ಮುಂದುವರಿಸಬೇಕು. ಪಾಲಕರು ಮಕ್ಕಳಿಗೆ ಧಾರ್ಮಿಕ ಗ್ರಂಥಗಳನ್ನು ಓದಿಸುವ ಮೂಲಕ ಸಂಸ್ಕಾರ ಹಾಗೂ ಧರ್ಮಾಚರಣೆಯ ಮಹತ್ವ ತಿಳಿಸಬೇಕು ಎಂದು ಕರೆ ನೀಡಿದರು.

ಜಿಲ್ಲಾ ಗ್ರಾಹಕ ನ್ಯಾಯ ಪೀಠದ ನಿವೃತ್ತ ಸದಸ್ಯ ಎಫ್.ಪಿ. ಲಕ್ಷ್ಮೇಶ್ವರಮಠ ಮಾತನಾಡಿ, ಜನಸೇವೆಯೇ ಜನಾರ್ಧನ ಸೇವೆಯಾಗಿದ್ದು, ಸಮಾಜಸೇವಕರು ಹಾಗೂ ಸರ್ಕಾರಿ ನೌಕರರು ಕರ್ತವ್ಯನಿಷ್ಠೆಯಿಂದ ಸೇವೆ ಸಲ್ಲಿಸಬೇಕು ಎಂದರು.

ಅಖಿಲ ಭಾರತ ಜಂಗಮ ಸೇವಾ ಸಮಿತಿಯ ಜಿಲ್ಲಾ ಪ್ರಧಾನ ಕಾರ್ಯದರ್ಶಿ ತೋಟಯ್ಯ ಗಡ್ಡಿಮಠ ಪ್ರಾಸ್ತಾವಿಕವಾಗಿ ಮಾತನಾಡಿ, ಸಮಿತಿಯು ಮೂರು ವರ್ಷ ಪೂರೈಸಿ ನಾಲ್ಕನೇ ವರ್ಷಕ್ಕೆ ಕಾಲಿಟ್ಟಿದೆ. ಕಳೆದ ವರ್ಷ 64 ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ, 35 ವಿದ್ಯಾರ್ಥಿಗಳಿಗೆ ಸಂಸ್ಕಾರ ಶಿಬಿರ, 100ಕ್ಕೂ ಹೆಚ್ಚು ವಟುಗಳಿಗೆ ಅಯ್ಯಾಚಾರ-ಲಿಂಗದೀಕ್ಷೆ ನೀಡುವುದರ ಜತೆಗೆ ಆರೋಗ್ಯ ಶಿಬಿರಗಳನ್ನು ಆಯೋಜಿಸಲಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಹೂವಿನಹಡಗಲಿ ಗವಿಮಠದ ಪೂಜ್ಯಶ್ರೀ ಡಾ. ಹಿರಿಶಾಂತವೀರ ಮಹಾಸ್ವಾಮಿಗಳು ಹಾಗೂ ಅಸೂಟಿಯ ರೇವಣಸಿದ್ದೇಶ್ವರ ಶ್ರೀಗಳು ಸಾನಿಧ್ಯ ವಹಿಸಿದ್ದರು. ಅಖಿಲ ಭಾರತ ಜಂಗಮ ಸೇವಾ ಸಮಿತಿ ಜಿಲ್ಲಾಧ್ಯಕ್ಷ ಕುಮಾರಸ್ವಾಮಿ ಹಿರೇಮಠ ಅಧ್ಯಕ್ಷತೆ ವಹಿಸಿದ್ದರು.

ರುದ್ರಾರಾಧ್ಯ ಶಾಸ್ತ್ರಿಗಳು ಚೌಕಿಮಠ, ವೀರಯ್ಯ ಶಾಸ್ತ್ರಿಗಳು ಹಿರೇಮಠ, ಮಹಿಳಾ ಘಟಕದ ಅಧ್ಯಕ್ಷೆ ಜಯಶ್ರೀ ವಸ್ತ್ರದ, ಅಮೃತಹನಿ ಸಂಸ್ಥಾಪಕ ಫಕೀರಯ್ಯ ಹಿರೇಮಠ, ಸಾಮಾಜಿಕ ಕಾರ್ಯಕರ್ತ ಶಿವಾನಂದಯ್ಯ ಹಿರೇಮಠ, ಆನಂದಯ್ಯ ವಿರಕ್ತಮಠ, ಎಂ.ಎನ್. ಶಿರೋಳಮಠ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಕುಮಾರಸ್ವಾಮಿ ಹಿರೇಮಠ ಹಾಗೂ ತಂಡದವರು ಪ್ರಾರ್ಥಿಸಿದರು. ಉಮಾಪತಿ ಭೂಸನೂರಮಠ ಕಾರ್ಯಕ್ರಮ ನಿರೂಪಿಸಿದರು.

## 'ಜಂಗಮಶ್ರೀ' ಪ್ರಶಸ್ತಿ ಪ್ರದಾನ

**ಸಾಹಿತ್ಯ, ಸಾಮಾಜಿಕ ಸೇವೆ, ವೈದಿಕ, ಕೃಷಿ, ಸಂಗೀತ, ಉದ್ಯಮ, ಶಿಕ್ಷಣ, ದಾಸೋಹ, ವೈದ್ಯಕೀಯ, ಕಲೆ, ಕ್ರೀಡೆ ಹಾಗೂ ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿದ ರುದ್ರಾರಾಧ್ಯ ಶಾಸ್ತ್ರಿಗಳು ಚೌಕಿಮಠ, ರೇವಣಸಿದ್ದಯ್ಯ ಸ್ವಾಮಿಗಳು ಹಿರೇಮಠ, ವೀರಯ್ಯ ಶಾಸ್ತ್ರಿಗಳು ಹಿರೇಮಠ, ಬಸಯ್ಯ ಸಾಸ್ವಿಹಳ್ಳಿಮಠ, ಡಾ. ಶಿವಬಸಯ್ಯ ಗಡ್ಡದಮಠ, ಕಳಕನಗೌಡ ಪಾಟೀಲ, ವೀರಭದ್ರಯ್ಯ ಹಿರೇಮಠ, ಚಂದ್ರಕಲಾ ಇಟಗಿಮಠ, ವಿನಯಕುಮಾರ ಗಂಧದ, ಈಶ್ವರಯ್ಯ ಹಿರೇಮಠ, ಶಿವಕುಮಾರ ಸ್ವಾಮಿಮಠ, ಶಿವಯ್ಯ ಅಲ್ಲಮಯ್ಯನವರ, ಧನಲಕ್ಷ್ಮೀ ಹಾಲ್ಮಠ, ಡಾ. ತೇಜಸ್ವಿನಿ ಹಿರೇಮಠ, ಅನುಸೂಯ ಹೊಸೂರುಮಠ, ಫಕ್ಕಿರಗೌಡ ಪಾಟೀಲ ಹಾಗೂ ಷಡಕ್ಷರಯ್ಯ ಹಿರೇಮಠ ಅವರಿಗೆ 'ಜಂಗಮಶ್ರೀ' ಪ್ರಶಸ್ತಿ ಪ್ರದಾನ ಮಾಡಲಾಯಿತು.**

## ಸಂಕ್ಷಿಪ್ತ ಸುದ್ದಿಗಳು

### ಬಿಜೆಪಿ ಮುಖಂಡರಿಗೆ ಕಾಂಗ್ರೆಸ್ ಯುವ ಮುಖಂಡ ಸೈಯದ್ ಖಾಲಿದ್ ಕೊಪ್ಪಳ ಸವಾಲು

# ಪ್ರತಿಭಟನೆ ಸಾಕು... ಮೊದಲು ರೈತರ ಸಾಲ ಮನ್ನಾ ಮಾಡಿಸಿ ತೋರಿಸಿ!

**ವಿಜಯಸಾಕ್ಷಿ ಸುದ್ದಿ, ಗದಗ**

ಬರಗಾಲದ ವಿಚಾರವನ್ನು ಮುಂದಿಟ್ಟುಕೊಂಡು ಪ್ರತಿಭಟನೆ ನಡೆಸುತ್ತಿರುವ ಬಿಜೆಪಿ ಮುಖಂಡರು ಹಾಗೂ ಕಾರ್ಯಕರ್ತರು



ಮೊದಲು ಕೇಂದ್ರ ಸರ್ಕಾರದಿಂದ ರೈತರ ಸಾಲ ಮನ್ನಾ ಮಾಡಿಸಿ, ರಾಜ್ಯಕ್ಕೆ ಬರಬೇಕಾದ ಬರ ಪರಿಹಾರ ಹಾಗೂ ಅಗತ್ಯ ಅನುದಾನವನ್ನು ಬಿಡುಗಡೆ ಮಾಡಿಸುವ ಪ್ರಯತ್ನ ಮಾಡಲಿ ಎಂದು ಕಾಂಗ್ರೆಸ್ ಯುವ ಮುಖಂಡ ಸೈಯದ್ ಖಾಲಿದ್ ಕೊಪ್ಪಳ ಸವಾಲು ಹಾಕಿದ್ದಾರೆ. ರೈತರು ಸಂಕಷ್ಟದಲ್ಲಿರುವ ಸಂದರ್ಭದಲ್ಲಿ ಕೇವಲ ಪ್ರತಿಭಟನೆ ನಡೆಸಿ ರಾಜಕೀಯ ಮಾಡುವುದರಿಂದ ಯಾವುದೇ ಪ್ರಯೋಜನವಿಲ್ಲ. ರೈತರಿಗೆ ನಿಜವಾದ ನೆರವು ದೊರೆಯಬೇಕಾದರೆ ಕೇಂದ್ರ ಸರ್ಕಾರದಿಂದ ಅಗತ್ಯ ಅನುದಾನ ಹಾಗೂ ಪರಿಹಾರ ಬಿಡುಗಡೆ ಮಾಡಿಸುವಂತೆ ಬಿಜೆಪಿ ನಾಯಕರು ಒತ್ತಾಯಿಸಬೇಕು ಎಂದು ಅವರು ಆಗ್ರಹಿಸಿದ್ದಾರೆ. ರೈತರ ಸಾಲ ಮನ್ನಾ ವಿಚಾರದಲ್ಲಿಯೂ ಬಿಜೆಪಿ ತನ್ನ ನಿಲುವನ್ನು ಸ್ಪಷ್ಟಪಡಿಸಬೇಕು. ರೈತರ ಪರವಾಗಿ ಮಾತನಾಡುವ ಬಿಜೆಪಿ ನಾಯಕರು ಕೇಂದ್ರ ಸರ್ಕಾರದ ಮಟ್ಟದಲ್ಲಿ ರೈತರಿಗೆ ಅಗತ್ಯ ನೆರವು, ಪರಿಹಾರ ಹಾಗೂ ಸೌಲಭ್ಯಗಳು ದೊರೆಯುವಂತೆ ಕ್ರಮ ಕೈಗೊಳ್ಳಬೇಕು ಎಂದು ಅವರು ಒತ್ತಾಯಿಸಿದ್ದಾರೆ. ರಾಜ್ಯ ಕಾಂಗ್ರೆಸ್ ಸರ್ಕಾರವು ವಿವಿಧ ಜನಪರ ಯೋಜನೆಗಳ ಮೂಲಕ ರೈತರು, ಮಹಿಳೆಯರು ಹಾಗೂ ಸಾಮಾನ್ಯ ಜನರಿಗೆ ಶಕ್ತಿ ತುಂಬುವ ಕೆಲಸ ಮಾಡುತ್ತಿದೆ. ರೈತರ ಕಲ್ಯಾಣ ಹಾಗೂ ಮಹಿಳೆಯರ ಸಬಲೀಕರಣಕ್ಕಾಗಿ ಸರ್ಕಾರ ಜಾರಿಗೊಳಿಸಿರುವ ವಿವಿಧ ಯೋಜನೆಗಳು ಜನಜೀವನಕ್ಕೆ ಸಹಕಾರಿಯಾಗುತ್ತಿವೆ ಎಂದು ತಿಳಿಸಿದ್ದಾರೆ. ಮಾಜಿ ಸಚಿವ ಎಚ್.ಕೆ. ಪಾಟೀಲ ಅವರಂತಹ ನಾಯಕರು ರೈತರ ಸಮಸ್ಯೆಗಳಿಗೆ ಸದಾ ಸ್ಪಂದಿಸುತ್ತಾ ಗದಗ ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ಮಹತ್ವದ ಕೊಡುಗೆ ನೀಡುತ್ತಿದ್ದಾರೆ. ರೈತರ ಕಲ್ಯಾಣ, ಗ್ರಾಮೀಣಾಭಿವೃದ್ಧಿ, ಶಿಕ್ಷಣ ಕ್ಷೇತ್ರದ ಪ್ರಗತಿ ಹಾಗೂ ಪರಿಸರ ಸಂರಕ್ಷಣೆಗೆ ಆದ್ಯತೆ ನೀಡಿ ಅವರು ನಿರಂತರವಾಗಿ ಜನಪರ ಕಾರ್ಯಗಳನ್ನು ಕೈಗೊಳ್ಳುತ್ತಿದ್ದಾರೆ ಎಂದು ಸೈಯದ್ ಖಾಲಿದ್ ಕೊಪ್ಪಳ ತಿಳಿಸಿದ್ದಾರೆ. ಬರಗಾಲದ ಹೆಸರಿನಲ್ಲಿ ರಾಜಕೀಯ ಮಾಡುವುದಕ್ಕಿಂತ ರೈತರ ನೆರವಿಗೆ ಕೇಂದ್ರ ಸರ್ಕಾರದಿಂದ ಅನುದಾನ ಹಾಗೂ ಸಾಲ ಮನ್ನಾ ಮಾಡಿಸುವ ನಿಟ್ಟಿನಲ್ಲಿ ಬಿಜೆಪಿ ನಾಯಕರು ಪ್ರಾಮಾಣಿಕ ಪ್ರಯತ್ನ ಮಾಡಬೇಕು. ರೈತರ ಹಿತಾಸಕ್ತಿಯೇ ಎಲ್ಲ ರಾಜಕೀಯಕ್ಕಿಂತ ಮುಖ್ಯ ಎಂದು ಕಾಂಗ್ರೆಸ್ ಯುವ ಮುಖಂಡ ಸೈಯದ್ ಖಾಲಿದ್ ಕೊಪ್ಪಳ ಪತ್ರಿಕಾ ಪ್ರಕಟಣೆಯಲ್ಲಿ ಹೇಳಿದ್ದಾರೆ.

## ವಿದ್ಯಾರ್ಥಿನಿಲಯ ಪ್ರವೇಶಕ್ಕೆ ಅರ್ಜಿ ಆಹ್ವಾನ

**ವಿಜಯಸಾಕ್ಷಿ ಸುದ್ದಿ, ಗದಗ**

2026-27ನೇ ಸಾಲಿನ ಇಲಾಖೆಯ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಿಗೆ ಹೊಸದಾಗಿ ಪ್ರವೇಶ ಪಡೆಯಲು ಬಯಸುವ ವಿದ್ಯಾರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಸೆಪ್ಟೆಂಬರ್ 30 ಕೊನೆಯ ದಿನವಾಗಿದೆ. ವಿದ್ಯಾರ್ಥಿಗಳು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ. ಗದಗ ತಾಲೂಕಿನ ಮೆಟ್ರಿಕ್ ನಂತರದ ಬಾಲಕ ಹಾಗೂ ಬಾಲಕಿಯರ ವಿದ್ಯಾರ್ಥಿನಿಲಯಗಳಲ್ಲಿ ಪ್ರವೇಶಕ್ಕಾಗಿ ಹೊಸದಾಗಿ ಪ್ರವೇಶ ಬಯಸುವ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ. ಈ ಅವಕಾಶವು ವೃತ್ತಿಪರ ಪದವಿ ಹಾಗೂ ಸ್ನಾತಕೋತ್ತರ ಪದವಿ ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಮಾತ್ರ ಅನ್ವಯವಾಗಲಿದೆ. ಪ್ರವರ್ಗ-1, 2ಎ, 2ಬಿ, 3ಎ, 3ಬಿ, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಇತರೆ ಜನಾಂಗಗಳಿಗೆ ಸೇರಿದ ವಿದ್ಯಾರ್ಥಿಗಳು 2026-27ನೇ ಸಾಲಿನ ಪ್ರವೇಶಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದು ಎಂದು ತಿಳಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಹಾಗೂ ತಾಲೂಕು ಮಟ್ಟದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿಗಳ ಕಚೇರಿಯನ್ನು ಸಂಪರ್ಕಿಸಬಹುದು ಎಂದು ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಕೃತಪುರ ಅರ್ಬನ್ ಸೌಹಾರ್ದ ಪತ್ತಿನ ಸಹಕಾರಿಯ ವಾರ್ಷಿಕ ಮಹಾಸಭೆ

# ಶೇರುದಾರರು ಫ್ಲೋಟ್ ನಿಯಮ ಪಾಲಿಸಿ ಸಹಕಾರಿಯ ಪ್ರಗತಿಗೆ ಕೈಜೋಡಿಸಿ



**ವಿಜಯಸಾಕ್ಷಿ ಸುದ್ದಿ, ಗದಗ**

ಸಹಕಾರಿ ಸಂಘ-ಸಂಸ್ಥೆಗಳು ಪ್ರಗತಿ ಹೊಂದಲು ಸದಸ್ಯರು ಹಾಗೂ ಶೇರುದಾರರು ಫ್ಲೋಟ್ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸುವುದು ಅವಶ್ಯವಾಗಿದೆ ಎಂದು ಗದುಗಿನ ಕೃತಪುರ ಅರ್ಬನ್ ಸೌಹಾರ್ದ ಪತ್ತಿನ ಸಹಕಾರಿ ನಿಯಮಿತದ ಅಧ್ಯಕ್ಷ ಮಹೇಶ ಕೋಟಿ ಹೇಳಿದರು.

ನಗರದ ಕಲ್ಯಾಣ ಬಸವೇಶ್ವರ ದೇವಸ್ಥಾನದ ಸಮುದಾಯ ಭವನದಲ್ಲಿ ರವಿವಾರ ಜರುಗಿದ ಕೃತಪುರ ಅರ್ಬನ್ ಸೌಹಾರ್ದ ಪತ್ತಿನ ಸಹಕಾರಿ ನಿಯಮಿತದ 2025-26ನೇ ಸಾಲಿನ ಸರ್ವ ಸದಸ್ಯರ ವಾರ್ಷಿಕ ಮಹಾಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸಹಕಾರಿ ಸಂಘದಲ್ಲಿ ಸಾಲ ಪಡೆದ ಸಾಲಗಾರರಷ್ಟೇ ಜಾಮೀನುದಾರರೂ ಜವಾಬ್ದಾರರಾಗಿರುತ್ತಾರೆ. ಸದಸ್ಯರು ಸಹಕಾರಿಯ ಫ್ಲೋಟ್ ನಿಯಮಗಳನ್ನು ಪಾಲಿಸಬೇಕು. ನಿಯಮ ಉಲ್ಲಂಘಿಸಿದಲ್ಲಿ ಸಹಕಾರಿ ಬೈಲಾ ಪ್ರಕಾರ ಸದಸ್ಯತ್ವದಿಂದ ಅನರ್ಹರಾಗುವ ಸಾಧ್ಯತೆಯಿದೆ ಎಂದು ತಿಳಿಸಿದರು.

ಸಾಲಗಾರರು ತಾವು ಪಡೆದ ಸಾಲವನ್ನು ಸಕಾಲದಲ್ಲಿ ಮರುಪಾವತಿ ಮಾಡಬೇಕು. ಜಾಮೀನುದಾರರು ಸಹ ಸಾಲ ಮರುಪಾವತಿ ಕುರಿತು ನಿಗಾ ವಹಿಸಬೇಕು. ಹಿರಿಯರ ಪರಿಶ್ರಮದಿಂದ ಸ್ಥಾಪನೆಯಾದ ಈ ಸಹಕಾರಿ ಸಂಸ್ಥೆಯನ್ನು ಮತ್ತಷ್ಟು ಪ್ರಗತಿಯತ್ತ ಕೊಂಡೊಯ್ಯಲು ನಿರ್ದೇಶಕರು ಹಾಗೂ ಶೇರುದಾರರು ಸಹಕರಿಸಬೇಕು ಎಂದು ಮನವಿ ಮಾಡಿದರು.

728 ಶೇರುದಾರರನ್ನು ಹೊಂದಿರುವ ಸಹಕಾರಿಯು 11 ಲಕ್ಷ 26 ಸಾವಿರ ರೂ.ಗಳ ಶೇರು ಬಂಡವಾಳ ಹೊಂದಿದೆ. 2025-26ನೇ ಸಾಲಿನಲ್ಲಿ ಸಹಕಾರಿಯು 3 ಕೋಟಿ 10 ಲಕ್ಷ 57 ಸಾವಿರ ರೂ.ಗಳ ವ್ಯವಹಾರ ನಡೆಸಿ, 11 ಲಕ್ಷ 44 ಸಾವಿರ ರೂ. ನಿವ್ವಳ ಲಾಭ ಗಳಿಸಿದೆ. ಶೇರುದಾರರಿಗೆ ಶೇ.8ರಷ್ಟು ಲಾಭಾಂಶ ನೀಡಲಾಗುವುದು ಎಂದು ವಾರ್ಷಿಕ ವರದಿ ಮಂಡಿಸಿ ಮಹೇಶ ಕೋಟಿ ತಿಳಿಸಿದರು.

ವೇದಿಕೆಯಲ್ಲಿ ನಿರ್ದೇಶಕರಾದ ಬಸವರಾಜ ರಾಮನಕೊಪ್ಪ, ಬಸವರಾಜ ಕೊರ್ಲಹಳ್ಳಿ, ಗಂಗಾಧರ ಮೇಲಗಿರಿ, ತೋಂಟೇಶ ಮಾನ್ವಿ, ಶಂಭು ಕಾರಕಟ್ಟಿ, ಸುಶೀಲಾ ಕೋಟಿ, ಸುರೇಖಾ ಪಿಳ್ಳಿ, ಕಲ್ಯಾಣಪ್ಪ ಕೋಟಿ, ಶರಣಬಸವ ಮಠದ ಹಾಗೂ ಶೈಲೇಶ ಬಾಗಮಾರ ಉಪಸ್ಥಿತರಿದ್ದರು. ಸೌಹಾರ್ದ ಫೆಡರೇಷನ್ ಗದಗ ಜಿಲ್ಲಾ ಸಂಯೋಜಕಿ ಗಂಗಮ್ಮ ನಾಯಕ ಭಾಗವಹಿಸಿದ್ದರು.

ಸುಶೀಲಾ ಕೋಟಿ ಸ್ವಾಗತಿಸಿದರು. ಸುರೇಖಾ ಪಿಳ್ಳಿ ಕಾರ್ಯಕ್ರಮ ನಿರೂಪಿಸಿದರು. ಗಂಗಾಧರ ಮೇಲಗಿರಿ ವಂದಿಸಿದರು.

ಸಭೆಯಲ್ಲಿ ನಗರಸಭೆಯ ಮಾಜಿ ಸದಸ್ಯ ಶರಣಪ್ಪ ಗದ್ದಿಕೇರಿ, ಶಿವಪುತ್ರಪ್ಪ ಕುಂದಗೋಳ, ಸಂಧ್ಯಾ ಕೋಟಿ, ಚೈತ್ರಾ ಕೋಟಿ, ಅಶೋಕ ಕುಡತಿನ್ನಿ, ಈರಪ್ಪ ಕೊಟ್ನೇಕಲ್ಲ, ಎಸ್.ಟಿ. ಪಾಟೀಲ, ಮಹಾರುದ್ರಪ್ಪ ನರಗುಂದ, ಮಲ್ಲಿಕಾರ್ಜುನ ಕೆಂಧೂಳಿ, ರಾಜಣ್ಣ ಬೇಲೇರಿ, ಸಿದ್ಧಮಲ್ಲಪ್ಪ ಕಾವೇರಿ, ರಮೇಶ ಪಿಳ್ಳಿ ಸೇರಿದಂತೆ ಹಲವರು ಪಾಲ್ಗೊಂಡಿದ್ದರು.

## ಸಂಭ್ರಮ, ಸಡಗರದಲ್ಲಿ ಜಕ್ಕಲಿಯ ಕಲ್ಮೇಶ್ವರ ಹುಚ್ಚಯ್ಯ ತೇರು

**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**



ಸಮೀಪದ ಜಕ್ಕಲಿ ಗ್ರಾಮದ ಆರಾಧ್ಯ ದೈವ ಕಲ್ಮೇಶ್ವರ ದೇವರ ಹುಚ್ಚಯ್ಯ ತೇರು ಉತ್ಸವ ಸೋಮವಾರ ನೂರಾರು ಭಕ್ತರ ಸಮ್ಮುಖದಲ್ಲಿ ಭಕ್ತಿ-ಭಾವ ಮತ್ತು ಸಂಭ್ರಮ-ಸಡಗರದಿಂದ ಜರುಗಿತು.

ಜಾತ್ರಾ ಮಹೋತ್ಸವದ ಅಂಗವಾಗಿ ಮುಂಜಾನೆಯಿಂದಲೇ ಕಲ್ಮೇಶ್ವರ ದೇವಸ್ಥಾನದಲ್ಲಿ ವಿಶೇಷ ಪೂಜೆ, ಮಹಾರುದ್ರಾಭಿಷೇಕ ಸೇರಿದಂತೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ನೆರವೇರಿದವು. ಗ್ರಾಮದ ಮಹಿಳೆಯರು ಮನೆಗಳಲ್ಲಿ ತಯಾರಿಸಿದ ವಿಶೇಷ ಸಿಹಿ ಅಡುಗೆಯ ಎಡೆಯನ್ನು ದೇವರಿಗೆ ಅರ್ಪಿಸಿ ಭಕ್ತಿಭಾವ ಮೆರೆದರು. ದೇವಸ್ಥಾನ ಸಮಿತಿಯಿಂದ ಭಕ್ತರಿಗೆ ಅನ್ನದಾಸೋಹವೂ ಏರ್ಪಡಿಸಲಾಗಿತ್ತು.

ಸಂಜೆ ವೀರಭದ್ರೇಶ್ವರ ದೇವಸ್ಥಾನದಿಂದ ನಂದಿಕೋಲನ್ನು ಮೆರವಣಿಗೆಯಲ್ಲಿ ಕಲ್ಮೇಶ್ವರ ದೇವಸ್ಥಾನಕ್ಕೆ ತರಲಾಯಿತು. ಬಳಿಕ ಶಿವಶರಣರಾದ ಅಣ್ಣಯ್ಯ-ತಮ್ಮಯ್ಯನವರ ಮನೆಯಿಂದ ಕಳಸವನ್ನು ತಂದು ವಿಶೇಷ ಪೂಜೆ ಸಲ್ಲಿಸಿ ಹುಚ್ಚಯ್ಯ ತೇರಿಗೆ ಜೋಡಿಸಲಾಯಿತು. ಶಿವಶರಣರ ಮರಿಮೊಮ್ಮಕ್ಕಳು ಪೂಜೆ ಸಲ್ಲಿಸಿದ ಬಳಿಕ ತೇರು ಎಳೆಯುವ ಮೂಲಕ ಉತ್ಸವಕ್ಕೆ ಚಾಲನೆ ನೀಡಲಾಯಿತು.

ವಿವಿಧ ಬಗೆಯ ಹೂವುಗಳಿಂದ ಅಲಂಕೃತಗೊಂಡ ಭವ್ಯ ತೇರು ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಾಗುತ್ತಿದ್ದಂತೆ 'ಶ್ರೀ ಕಲ್ಮೇಶ್ವರ ಮಹಾರಾಜ್ ಕೀ ಜೈ', 'ಹರ ಹರ ಮಹಾದೇವ' ಎಂಬ ಭಕ್ತರ ಜಯಘೋಷಗಳು ಮೊಳಗಿದವು. ಉತ್ತತ್ತಿ ಎಸೆದು, ನಮಸ್ಕರಿಸಿ ಭಕ್ತರು ತೇರನ್ನು ಎಳೆದರು. ದುರ್ಗಾದೇವಿ ಹಾಗೂ ಬೀರದೇವರ ಡೊಳ್ಳು ಮೇಳದ ಡೊಳ್ಳು ಕುಣಿತ ಉತ್ಸವಕ್ಕೆ ವಿಶೇಷ ಮೆರುಗು ನೀಡಿತು. ಯುವಕರ ತಂಡ ನಂದಿಕೋಲನ್ನು ಒಂದೇ ಕೈಯಲ್ಲಿ ಎತ್ತಿ ಹಿಡಿದು ಪ್ರದರ್ಶಿಸಿದ್ದು ನೆರೆದಿದ್ದವರ ಗಮನ ಸೆಳೆಯಿತು.

ವೀರಭದ್ರೇಶ್ವರ ದೇವಸ್ಥಾನದ ಬಳಿ ಸಾಂಪ್ರದಾಯಿಕ ಒಡಪುಗಳ ಘೋಷ ಮೊಳಗುತ್ತಿದ್ದಂತೆ ಭಕ್ತರು ಭಕ್ತಿಯ ಪರವಶತೆಯಲ್ಲಿ ತೇಲಿದರು. ತಳಿರು-ತೋರಣಗಳು ಹಾಗೂ ದೇವಸ್ಥಾನದ ಗೋಪುರ, ದೀಪಸ್ತಂಭ ಮತ್ತು ನವಗ್ರಹ ಮಂಟಪಕ್ಕೆ ಮಾಡಿದ್ದ ವಿದ್ಯುತ್ ದೀಪಾಲಂಕಾರ ಜಾತ್ರೆಯ ರಾತ್ರಿಯ ಸೊಬಗನ್ನು ಮತ್ತಷ್ಟು ಹೆಚ್ಚಿಸಿತು.

ಗ್ರಾಮದ ಪ್ರಮುಖ ದೇವಸ್ಥಾನಗಳು ಹಾಗೂ ಬೀದಿಗಳಲ್ಲಿ ಸಂಚರಿಸಿದ ಹುಚ್ಚಯ್ಯ ಉತ್ಸವವು ಭೋರ್ಗಲ್‌ವರೆಗೆ ತೆರಳಿ ಮರಳಿ ಸ್ವಸ್ಥಾನ ತಲುಪಿದಾಗ ಭಕ್ತರು ಸಂಭ್ರಮಿಸಿದರು.

### ಹಿಂದೂ ಸಮಾಜದಲ್ಲಿ ಜಾಗೃತಿ ಅಗತ್ಯ: ವಿನಾಯಕ ತಳಗೇರಿ

# ದೇಶ, ಸಮಾಜಕ್ಕಾಗಿ ಕೆಲಸ ಮಾಡುವ ಸಂಕಲ್ಪ ಮಾಡಬೇಕು

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**



ಹಿಂದೂಗಳ ಬಗ್ಗೆ ಹಿಂದೂಗಳು ದೇಶವ್ಯಾಪಿ ಜಾಗೃತರಾಗಬೇಕು. ಪ್ರತಿಯೊಬ್ಬ ಹಿಂದೂ ಪ್ರಜೆಯೂ ದೇಶ ಹಾಗೂ ಹಿಂದೂ ಸಮಾಜಕ್ಕಾಗಿ ಕೆಲಸ ಮಾಡುತ್ತೇನೆ ಎಂಬ ಸಂಕಲ್ಪ ಮಾಡಬೇಕು ಎಂದು ವಿಶ್ವ ಹಿಂದೂ ಪರಿಷತ್ ಕರ್ನಾಟಕ ಉತ್ತರ ಪ್ರಾಂತ ಸಹ ಕಾರ್ಯದರ್ಶಿ ವಿನಾಯಕ ತಳಗೇರಿ ಹೇಳಿದರು.

ಪಟ್ಟಣದ ಶಂಕರ ಭಾರತಿಮಠದ ಸಮುದಾಯ ಭವನದಲ್ಲಿ ರಾಷ್ಟ್ರೀಯ ಸ್ವಯಂಸೇವಕ ಸಂಘದ ಲಕ್ಷ್ಮೇಶ್ವರ ಘಟಕದಿಂದ ಶನಿವಾರ ಆಯೋಜಿಸಿದ್ದ ರಕ್ಷಾ ಬಂಧನ ಕಾರ್ಯಕ್ರಮವನ್ನುದ್ದೇಶಿಸಿ ಅವರು ಮಾತನಾಡಿದರು.

ರಾಷ್ಟ್ರೀಯ ಸ್ವಯಂಸೇವಕ ಸಂಘದ ಕಾರ್ಯಗಳಿಗೆ ಹಿಂದೂಗಳು ಸಮಯ ನೀಡಬೇಕು ಹಾಗೂ ಸೇವಾ ಚಟುವಟಿಕೆಗಳಲ್ಲಿ ತೊಡಗಿಕೊಳ್ಳಬೇಕು. ಪ್ರತಿಯೊಂದು ಮನೆಯಲ್ಲೂ ಹಿಂದೂ ಜಾಗೃತಿ ಮೂಡಿಸುವ ಕಾರ್ಯ ನಡೆಯಬೇಕಿದೆ ಎಂದು ಹೇಳಿದರು.

ಗೋಹತ್ಯೆ, ಮತಾಂತರ ಹಾಗೂ ಲವ್ ಜಿಹಾದ್ ತಡೆಯುವ ನಿಟ್ಟಿನಲ್ಲಿ ಸಮಾಜದಲ್ಲಿ ಜಾಗೃತಿ ಮೂಡಿಸಬೇಕಾಗಿದೆ. ದೇಶದಲ್ಲಿ ಹಿಂದುತ್ವದ ಪರವಾದ ವಾತಾವರಣ ನಿರ್ಮಾಣವಾಗುತ್ತಿರುವ ಸಂದರ್ಭದಲ್ಲಿ ಹಲವು ಸವಾಲುಗಳನ್ನು ಎದುರಿಸುವ ಪರಿಸ್ಥಿತಿಯೂ ಇದೆ. ಯುವಶಕ್ತಿಯನ್ನು ಬೇರೆಡೆ ಸೆಳೆಯಲು ಷಡ್ಯಂತ್ರಗಳು ನಡೆಯುತ್ತಿದ್ದು, ಇಂತಹ ಪ್ರಯತ್ನಗಳಿಗೆ ಹಿಂದೂ ಸಮಾಜ ಕಡಿವಾಣ ಹಾಕಬೇಕು ಎಂದು ತಿಳಿಸಿದರು. ರಕ್ಷಾ ಬಂಧನ ಹಬ್ಬವನ್ನು ಭಾರತ ಮಾತ್ರವಲ್ಲದೆ ವಿದೇಶಗಳಲ್ಲಿಯೂ ಉತ್ಸಾಹದಿಂದ ಆಚರಿಸಲಾಗುತ್ತಿದೆ. ಈ ಹಬ್ಬವು ಪರಸ್ಪರ ಸಹೋದರತ್ವ, ಏಕತೆ ಹಾಗೂ ಎಲ್ಲರೂ ಒಂದೇ ಎಂಬ ಭಾವನೆಯನ್ನು ಸಾರುತ್ತದೆ. ಕಷ್ಟದ ದಿನಗಳಲ್ಲಿಯೂ ರಾಷ್ಟ್ರೀಯ ಸ್ವಯಂಸೇವಕ ಸಂಘ ಬೆಳೆದುಬಂದಿದೆ. ಇಂದು ಸಂಘದ ಚಟುವಟಿಕೆಗಳಿಗೆ ಮುಕ್ತ ಅವಕಾಶ ದೊರೆತಿದ್ದು, ವಿದೇಶಗಳಲ್ಲಿಯೂ ರಾಮನ ಜಪ ನಡೆಯುತ್ತಿರುವುದು ಸಂತಸದ ಸಂಗತಿಯಾಗಿದೆ ಎಂದರು.

ಶಾರದಾ ಸಂಗೀತ ಗುರುಕುಲದ ಸಂಸ್ಥಾಪಕ ಕೃಷ್ಣಕುಮಾರ ಕುಲಕರ್ಣಿ ಮಾತನಾಡಿ, ದೇಶ ಹಾಗೂ ಸಮಾಜಕ್ಕೆ ಕಂಟಕ ಎದುರಾದಾಗಲೆಲ್ಲ ರಕ್ಷಾ ಬಂಧನದಂತಹ ಹಬ್ಬಗಳು ಜನರಲ್ಲಿ ಆತ್ಮಸ್ಥೈರ್ಯ ತುಂಬುತ್ತವೆ. ಯುವಜನರು ದೇಶದ ಪ್ರಗತಿಗಾಗಿ ತಮ್ಮದೇ ಆದ ಕೊಡುಗೆ ನೀಡುವ ಸಂಕಲ್ಪದೊಂದಿಗೆ ಮುನ್ನಡೆದರೆ ಆದರ್ಶ ಜೀವನ ಕಟ್ಟಿಕೊಳ್ಳಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಆರ್‌ಎಸ್‌ಎಸ್ ಜಿಲ್ಲಾ ಕಾರ್ಯಕಾರಿಣಿ ಸದಸ್ಯ ಚಂದ್ರಶೇಖರ ಹಂಪಣ್ಣವರ, ತಾಲೂಕು ಕಾರ್ಯವಾಹ ಶಿವರಾಜ ಗುಜರಿ, ಸುನೀಲ ಮೆಡ್ಲೇರಿ, ಉಮೇಶ ಮಡಿವಾಳರ, ಪಾಂಡುರಂಗ ಕಾಕಡೆ, ಗುರು ಮೆಡ್ಲೇರಿ, ರಾಜು ಅರಳಿ, ಪ್ರವೀಣ, ವೈ.ಕೆ. ಲಿಂಗಶೆಟ್ಟಿ, ರೋಹಿತ ಬಾಕಳೆ, ಮುರುಗೇಶ ದುಂಡಿ, ಯಲ್ಲಪ್ಪ ಶಿರಬಡಗಿ, ಶಂಕರ ಬ್ಯಾಡಗಿ, ಮಂಜುನಾಥ ಬೆಂಗಳೂರು, ಸಂತೋಷ ಬಡಿಗೇರ ಹಾಗೂ ಕೊಟ್ರೇಶ ಅಳವಂಡಿ ಉಪಸ್ಥಿತರಿದ್ದರು.

## ಸಂಕ್ಷಿಪ್ತ ಸುದ್ದಿಗಳು

### ನಿಧನ

#### ಶಾಂತಪ್ಪ ಗುಡ್ಡದ



**ಅಣ್ಣಿಗೇರಿ:** ತಾಲೂಕಿನ ಮಜ್ಜಿಗುಡ್ಡ ಗ್ರಾಮದ ನಿವಾಸಿ ಶಾಂತಪ್ಪ ದೇವೇಂದ್ರಪ್ಪ ಗುಡ್ಡದ (93) ಬುಧವಾರ ನಿಧನರಾದರು. ಅವರಿಗೆ ನಾಲ್ವರು ಪುತ್ರರು, ಮೂವರು ಪುತ್ರಿಯರು ಸೇರಿದಂತೆ ಅಪಾರ ಬಂಧು ಬಳಗವಿದೆ.

### ಇಂದು ಕರೇವಾಡಿಮಠದಲ್ಲಿ ಪುಣ್ಯಾರಾಧನೆ

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಹಳ್ಳದಕೇರಿ ಓಣಿಯಲ್ಲಿರುವ ಕರೇವಾಡಿಮಠದಲ್ಲಿ ಲಿಂ. ಶ್ರೀ ಶಂಕರ ಶಿವಾಚಾರ್ಯ ಮಹಾಸ್ವಾಮಿಗಳ ಪುಣ್ಯಾರಾಧನೆ ಹಾಗೂ ಸಂಸ್ಕರಣೋತ್ಸವದ ಅಂಗವಾಗಿ ಸೆ. 3ರಂದು ವಿವಿಧ ಧಾರ್ಮಿಕ, ಸಾಂಸ್ಕೃತಿಕ ಹಾಗೂ ಭಜನಾ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ.

ಸಂಜೆ 6.30ಕ್ಕೆ ಶ್ರೀಮಠದ ಮಳೆಮಲ್ಲಿಕಾರ್ಜುನ ಶಿವಾಚಾರ್ಯ ಮಹಾಸ್ವಾಮಿಗಳ ದಿವ್ಯ ಸಾನ್ನಿಧ್ಯದಲ್ಲಿ ಧರ್ಮಸಭೆ ನಡೆಯಲಿದ್ದು, ಡಾ. ಸುಜ್ಞಾನದೇವ ಶಿವಾಚಾರ್ಯ ಮಹಾಸ್ವಾಮಿಗಳು, ಶ್ರೀ ಡಾ. ಮಂಜುನಾಥಯ್ಯ ದೇವರು ಹಾಗೂ ಶ್ರೀ ಅಭಿಷೇಕ ದೇವರು ಉಪಸ್ಥಿತರಿರುವರು. ಬಳಿಕ ಗಂಜಿಗಟ್ಟಿಯ ಆರ್. ಕೃಷ್ಣಮೂರ್ತಿ ಹಾಗೂ ಚಿತ್ರದುರ್ಗದ ಪಿ. ಮೀನಾಕ್ಷಿ ಅವರಿಂದ ಜಾನಪದ ಸಂಗೀತ ಕಾರ್ಯಕ್ರಮ ನಡೆಯಲಿದೆ. ಶ್ರೀ ಶಾರದಾ ಸ್ವರಾಂಜಲಿ ಸಂಗೀತ ಪಾಠಶಾಲೆಯ ಮಕ್ಕಳಿಂದ ಸಂಗೀತ ಸೇವೆ ಹಾಗೂ ವಿವಿಧ ಭಜನಾ ಸಂಘಗಳಿಂದ ಭಜನಾ ಸೇವೆ ಜರುಗಲಿದೆ. ಸಮಸ್ತ ಶಿಷ್ಯರು ಹಾಗೂ ಸದ್ಭಕ್ತರು ಕಾರ್ಯಕ್ರಮದಲ್ಲಿ ಭಾಗವಹಿಸಿ ಶ್ರೀಗುರು ಕೃಪೆಗೆ ಪಾತ್ರರಾಗಬೇಕೆಂದು ಕರೇವಾಡಿಮಠದ ಪ್ರಕಟಣೆ ತಿಳಿಸಿದೆ.

### ಸಹಾಯಧನ ಯೋಜನೆಗಳಿಗೆ ಅರ್ಜಿ ಆಹ್ವಾನ

**ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ಕ್ರಿಶ್ಚಿಯನ್ ಸಮುದಾಯ ಅಭಿವೃದ್ಧಿ ನಿಗಮ ವತಿಯಿಂದ 2026–27ನೇ ಸಾಲಿನ ವಿವಿಧ ಸಹಾಯಧನ ಹಾಗೂ ಸಾಲ ಯೋಜನೆಗಳಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಅರಿವು ಸಾಲ ಯೋಜನೆ, ವಿದೇಶಿ ವಿದ್ಯಾಭ್ಯಾಸ ಸಾಲ ಯೋಜನೆ, ಕ್ರಿಶ್ಚಿಯನ್ ಸಮುದಾಯದ ಮಹಿಳಾ ಸ್ವಸಹಾಯ ಗುಂಪುಗಳಿಗೆ ಸಹಾಯಧನ ಹಾಗೂ ಫಾಸ್ಟ್ ಫುಡ್ ಟ್ರಕ್, ಟ್ರೇಲರ್, ಮೊಬೈಲ್ ಅಡುಗೆಮನೆ ಮತ್ತು ಆಹಾರ ಮಳಿಗೆ ಯೋಜನೆಗಳಿಗೆ ಅರ್ಜಿ ಸಲ್ಲಿಸಬಹುದಾಗಿದೆ.

ಅರ್ಜಿ ಸಲ್ಲಿಸಲು ಸೆಪ್ಟೆಂಬರ್ 30 ಕೊನೆಯ ದಿನವಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 08372–295147 ಅಥವಾ ಸಹಾಯವಾಣಿ ಸಂಖ್ಯೆ 6360753075ಗೆ ಸಂಪರ್ಕಿಸಬಹುದು.


ಸರ್ವ ಶಿಕ್ಷಣ ಅಭಿಯಾನ ಕರ್ನಾಟಕ

**ಉಪನಿರ್ದೇಶಕರ ಕಛೇರಿ ಶಾಲಾ ಶಿಕ್ಷಣ ಇಲಾಖೆ, ಸಮಗ್ರ ಶಿಕ್ಷಣ ಕರ್ನಾಟಕ, ಗದಗ**

ಸಂ/ಸಶಿಅ/ಕೆಜಿಬಿವಿ/ಆಪೂ/ಹೊಗು/ನೇ.ಕು/2026–27 ದಿನಾಂಕ: 31–08–2026

**ಅಲ್ಪಾವಧಿ ಟೆಂಡರ ಪ್ರಕಟಣೆ**

ಗದಗ ಜಿಲ್ಲೆಯ ಸಶಿಕ ಕಾರ್ಯಕ್ರಮದಡಿ ಬರುವ ಜಿಲ್ಲೆಯ ಕೆ.ಜಿ.ಬಿ.ವಿ ಟೈಪ1–ವಸತಿ ಶಾಲೆಗಳ ಟೈಪ್–4 ವಸತಿ ನಿಲಯ ಹಾಗೂ ಕೆಕೆಜಿಬಿವಿ ವಸತಿ ನಿಲಯಗಳ ವಿದ್ಯಾರ್ಥಿಗಳಿಗೆ ಆಹಾರ ಪೂರೈಕೆ ಸೇವೆ ಪಡೆಯಲು ಅರ್ಹ ಸಂಸ್ಥೆಗಳಿಂದ ದ್ವಿ ಲಕೋಟೆ ಮಾದರಿಯಲ್ಲಿ ಅಲ್ಪಾವಧಿ ಟೆಂಡರ ಕರೆದಿದ್ದು ವಿವರ ಕೆಳಗಿನಂತಿದೆ.

| ಕ್ರ. ಸಂ. | ವಿವರ | ಟೆಂಡರ ಮೊತ್ತ (ಲಕ್ಷಗಳಲ್ಲಿ) | ಟೆಂಡರ್ ಸಂಖ್ಯೆ |
|---|---|---|---|
| 1 | ಕೆ.ಜಿ.ಬಿ.ವಿ ಟೈಪ–1 | **40.80** | DPI/2026-27/SE0502 |
| 2 | ಕೆ.ಜಿ.ಬಿ.ವಿ ಟೈಪ–4 | **40.80** | DPI/2026-27/SE0503 |
| 3 | ಕೆ.ಕೆ.ಜಿ.ಬಿ.ವಿ ಗೋಜನೂರ | **15.00** | DPI/2026-27/SE0504 |

ಟೆಂಡರಗಳನ್ನು ದಿನಾಂಕ : **31–08–2026** ರಿಂದ ಸಲ್ಲಿಸಬಹುದಾಗಿದ್ದು, ಅಂತಿಮ ದಿನಾಂಕ : **15–09–2026** ಸಂಜೆ 5.00 ಗಂಟೆ ಇರುತ್ತದೆ. ಈ ಕುರಿತು ಅಂತರ್ಜಾಲ ತಾಣದ ವಿಳಾಸ **http//:www.kppp.karnataka.gov.in** ನ ಮೂಲಕ ಟೆಂಡರ್ ಬುಕ್‌ಲೆಟ್‌ನ್ನು ಪಡೆಯಬಹುದಾಗಿದೆ

ಸಹಿ/– ಉಪನಿರ್ದೇಶಕರು(ಆ),
ಪ.ನಿ.ಜಿ.ಯೋ. ಸಮನ್ವಯಾಧಿಕಾರಿಗಳು,
ಸಮಗ್ರ ಶಿಕ್ಷಣ ಕರ್ನಾಟಕ, ಗದಗ

ವಾಸಾಸಂಇ/ಗದಗ/227/ಕೆಎಸ್‌ಎಂಸಿಎ/2026–27


### ಉತ್ತಮ ಮಳೆ, ಸಮೃದ್ಧ ಬೆಳೆಗಾಗಿ ಪ್ರಾರ್ಥನೆ; ರೈತರು ನೆಮ್ಮದಿಯಿಂದ ಬದುಕಲಿ ಎಂದ ಡಿ.ಕೆ. ಶಿವಕುಮಾರ

# ಅಜ್ಜಯ್ಯನ ಗದ್ದುಗೆಯ ಮುಂದೆ ಸಿಎಂ ಸಂಕಲ್ಪ!



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಮುಕ್ತಿಮಂದಿರ ಧರ್ಮಕ್ಷೇತ್ರವು ನನ್ನ ನಂಬಿಕೆಯ ಹಾಗೂ ಹೃದಯಕ್ಕೆ ಹತ್ತಿರವಾದ ದೈವಿಕ ಮತ್ತು ಪವಿತ್ರ ಕ್ಷೇತ್ರವಾಗಿದೆ. ಈ ಹಿಂದೆ ಲಿಂ. ವೀರಗಂಗಾಧರ ಜಗದ್ಗುರುಗಳ (ಅಜ್ಜಯ್ಯ) ಕರ್ತೃಗದ್ದುಗೆಯ ಮುಂದೆ ಸಲ್ಲಿಸಿದ್ದ ಪ್ರಾರ್ಥನೆ ಮತ್ತು ಸಂಕಲ್ಪ ಈಡೇರಿದ ಹಿನ್ನೆಲೆಯಲ್ಲಿ ಮತ್ತೊಮ್ಮೆ ದರ್ಶನ ಪಡೆದು ಪೂಜೆ ಸಲ್ಲಿಸಿದ್ದೇನೆ. ರಾಜ್ಯದಲ್ಲಿ ಉತ್ತಮ ಮಳೆಯಾಗಿ, ಸಮೃದ್ಧ ಬೆಳೆ ಬರಲಿ, ರೈತರು ಹಾಗೂ ಜನರು ನೆಮ್ಮದಿಯಿಂದ ಬದುಕುವಂತಾಗಲಿ ಎಂದು ಪ್ರಾರ್ಥಿಸಿದ್ದೇನೆ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಹೇಳಿದರು.

ಗದಗ ಜಿಲ್ಲೆಯ ಬರ ಪರಿಸ್ಥಿತಿ ಪರಿಶೀಲನೆ ನಡೆಸಿದ ಬಳಿಕ ಮಂಗಳವಾರ ಲಕ್ಷ್ಮೇಶ್ವರ ತಾಲೂಕಿನ ಮುಕ್ತಿಮಂದಿರ ಧರ್ಮಕ್ಷೇತ್ರಕ್ಕೆ ಭೇಟಿ ನೀಡಿದ ಅವರು, ಲಿಂ. ವೀರಗಂಗಾಧರ ಜಗದ್ಗುರುಗಳ ಕರ್ತೃಗದ್ದುಗೆಯಲ್ಲಿ ವಿಶೇಷ ಪೂಜೆ ಸಲ್ಲಿಸಿ ಸುದ್ದಿಗಾರರೊಂದಿಗೆ ಮಾತನಾಡಿದರು.

ಮುಕ್ತಿಮಂದಿರ ಧರ್ಮಕ್ಷೇತ್ರದ ಪಟ್ಟಾಧ್ಯಕ್ಷ ಶ್ರೀ ವಿಮಲರೇಣುಕ ವೀರಮುಕ್ತಿಮುನಿ ಶಿವಾಚಾರ್ಯರು ಹಾಗೂ ನೊಣವಿನಕೆರೆ ಕಾಡಸಿದ್ದೇಶ್ವರ ಮಠದ ಶ್ರೀ ಕ–ರಿವೃಷಭ ದೇಶಿಕೇಂದ್ರ ಶಿವಯೋಗೀಶ್ವರ ಶಿವಾಚಾರ್ಯರ ಮಾರ್ಗದರ್ಶನದಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಅವರು ಅಭಿಷೇಕ, ಅಷ್ಟೋತ್ತರ ಹಾಗೂ ಮಹಾಮಂಗಳಾರತಿ ನೆರವೇರಿಸಿದರು. ಬಳಿಕ ಕೆಲಕಾಲ ಕರ್ತೃಗದ್ದುಗೆಯಲ್ಲಿ ವಿಶೇಷ ಪೂಜೆ ಸಲ್ಲಿಸಿ ಪ್ರಾರ್ಥಿಸಿದರು.

ಮಾನವ ಧರ್ಮಕ್ಕೆ ಜಯವಾಗಲಿ ಹಾಗೂ ಧರ್ಮದಿಂದಲೇ ವಿಶ್ವಕ್ಕೆ ಶಾಂತಿ ಎಂಬ ಸಂದೇಶ ಸಾರಿದ ಲಿಂ. ವೀರಗಂಗಾಧರ ಜಗದ್ಗುರುಗಳ ಪಾವನ ಕ್ಷೇತ್ರ ಇದಾಗಿದೆ. ಈ ಕ್ಷೇತ್ರದ ಮೇಲೆ ನನಗೆ ಅಪಾರವಾದ ಶ್ರದ್ಧೆಯಿದೆ. ಭಕ್ತ ಮತ್ತು ಭಗವಂತನ ನಡುವೆ ಪವಿತ್ರ ಬಂಧವನ್ನು ಬೆಸೆಯುವ ಶಕ್ತಿ ಇಂತಹ ಧರ್ಮಕ್ಷೇತ್ರಗಳಿಗೆ ಇದೆ ಎಂದು ಹೇಳಿದರು.

ಬಳಿಕ ಶ್ರೀ ವಿಮಲರೇಣುಕ ವೀರಮುಕ್ತಿ ಮುನಿ ಶಿವಾಚಾರ್ಯರೊಂದಿಗೆ ಕ್ಷೇತ್ರದಲ್ಲಿ ನಡೆಯುತ್ತಿರುವ ತ್ರಿಕೋಟಿ ಶಿವಲಿಂಗ ಸ್ಥಾಪನೆ, ಸಮುದಾಯ ಭವನ, ಅನ್ನದಾಸೋಹ ಸೇರಿದಂತೆ ವಿವಿಧ ಅಭಿವೃದ್ಧಿ ಕಾರ್ಯಗಳ ಕುರಿತು ಮಾಹಿತಿ ಪಡೆದ ಮುಖ್ಯಮಂತ್ರಿ, ಮುಕ್ತಿಮಂದಿರ ಧರ್ಮಕ್ಷೇತ್ರದ ಅಭಿವೃದ್ಧಿ ನೀಡುವುದಾಗಿ ಭರವಸೆ ನೀಡಿದರು.

> ಮುಕ್ತಿಮಂದಿರ ನನ್ನ ನಂಬಿಕೆಯ ಹಾಗೂ ಹೃದಯಕ್ಕೆ ಹತ್ತಿರವಾದ ಪವಿತ್ರ ಕ್ಷೇತ್ರ. ರಾಜ್ಯದಲ್ಲಿ ಉತ್ತಮ ಮಳೆಯಾಗಿ, ಸಮೃದ್ಧ ಬೆಳೆ ಬರಲಿ; ರೈತರು ಮತ್ತು ಜನರು ನೆಮ್ಮದಿಯಿಂದ ಬದುಕುವಂತಾಗಲಿ ಎಂದು ಅಜ್ಜಯ್ಯನ ಕರ್ತೃಗದ್ದುಗೆಯಲ್ಲಿ ಪ್ರಾರ್ಥಿಸಿದ್ದೇನೆ.
>
> - ಡಿ.ಕೆ. ಶಿವಕುಮಾರ, ಮುಖ್ಯಮಂತ್ರಿ

ಗದಗ ಜಿಲ್ಲೆಯ ಬರ ಪರಿಸ್ಥಿತಿಯನ್ನು ಖುದ್ದಾಗಿ ಅರಿಯುವ ಉದ್ದೇಶದಿಂದ ಜಿಲ್ಲೆಗೆ ಭೇಟಿ ನೀಡಿದ್ದೇನೆ.

ಜಿಲ್ಲೆಯ ಏಳು ತಾಲೂಕುಗಳ ಪೈಕಿ ಗಜೇಂದ್ರಗಡ ತಾಲೂಕನ್ನು ಮಾತ್ರ ಬರಪೀಡಿತ ಎಂದು ಘೋಷಿಸಿರುವುದು ಗಮನಕ್ಕೆ ಬಂದ ಹಿನ್ನೆಲೆಯಲ್ಲಿ ನೆಲದ ಮೇಲಿನ ವಾಸ್ತವ ಪರಿಸ್ಥಿತಿಯನ್ನು ಪರಿಶೀಲಿಸಿದ್ದೇನೆ ಎಂದು ಮುಖ್ಯಮಂತ್ರಿ ಹೇಳಿದರು.

ಜಿಲ್ಲೆಯಲ್ಲಿ ಶೇ. 40ರಿಂದ 44ರಷ್ಟು ಮಳೆ ಕೊರತೆಯಾಗಿದ್ದು, ಬರ ಪರಿಸ್ಥಿತಿ ಗಂಭೀರವಾಗಿದೆ ಎಂಬುದು ಮನವ–ರಿಕೆಯಾಗಿದೆ. ರೈತರ ಜಮೀನುಗಳಿಗೆ ತೆರಳಿ ಹತ್ತಿ, ಕಡಲೆಕಾಯಿ, ಜೋಳ ಹಾಗೂ ಸೂರ್ಯಕಾಂತಿ ಬೆಳೆಗಳ ಸ್ಥಿತಿಯನ್ನು ಕಣ್ಣಾರೆ ಕಂಡಿದ್ದೇನೆ. ರೈತರು ಎದುರಿಸುತ್ತಿರುವ ಸಂಕಷ್ಟದ ಪ್ರಮಾಣವೂ ತಿಳಿದುಬಂದಿದೆ ಎಂದರು.

ಬರಪೀಡಿತ ತಾಲೂಕುಗಳನ್ನು ಘೋಷಿಸಲು ಸರ್ಕಾರದ ನಿಗದಿತ ಮಾರ್ಗಸೂಚಿಗಳಿವೆ. ಅದರಂತೆ ಸಮಗ್ರ ಅಧ್ಯಯನ ನಡೆಸಿ ಶೀಘ್ರದಲ್ಲೇ ಎರಡನೇ ಹಂತದ ಬರಪೀಡಿತ ತಾಲೂಕುಗಳ ಪಟ್ಟಿಯನ್ನು ಪ್ರಕಟಿಸಲಾಗುವುದು ಎಂದು ಡಿ.ಕೆ. ಶಿವಕುಮಾರ ತಿಳಿಸಿದರು.

ಜಿಲ್ಲಾ ಉಸ್ತುವಾರಿ ಸಚಿವರ ನೇತೃತ್ವದಲ್ಲಿ ಜಿಲ್ಲೆಯ ಶಾಸಕರು ಎಲ್ಲ ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸುವಂತೆ ಮನವಿ ಸಲ್ಲಿಸಿದ್ದಾರೆ. ಮನವಿಯ ಜತೆಗೆ ವಾಸ್ತವ ಪರಿಸ್ಥಿತಿಯನ್ನೂ ಸರ್ಕಾರ ಗಂಭೀರವಾಗಿ ಪರಿಗಣಿಸಲಿದೆ ಎಂದು ಹೇಳಿದರು.

ವಿಧಾನಸಭೆಯಲ್ಲಿ ಬರ ಪರಿಸ್ಥಿತಿ ಕುರಿತು ಸಮಗ್ರವಾಗಿ ಚರ್ಚಿಸಿ, ಸರ್ಕಾರ ನೂರು ದಿನಗಳಲ್ಲಿ ಕೈಗೊಂಡಿರುವ ಕ್ರಮಗಳು ಹಾಗೂ ಮುಂದಿನ ಕಾರ್ಯಯೋಜನೆ ಕುರಿತು ವಿವರಿಸಲು ಉದ್ದೇಶಿಸಿದ್ದೆ. ಆದರೆ ಪ್ರತಿಪಕ್ಷದವರು ಅದಕ್ಕೆ ಅವಕಾಶ ನೀಡಲಿಲ್ಲ ಎಂದು ಮುಖ್ಯಮಂತ್ರಿ ಟೀಕಿಸಿದರು.

ಈ ಸಂದರ್ಭದಲ್ಲಿ ಸಚಿವ ಎಸ್. ಎಸ್. ಮಲ್ಲಿಕಾರ್ಜುನ, ಶಾಸಕರಾದ ಡಾ. ಚಂದ್ರು ಲಮಾಣಿ, ಎನ್.ಎಚ್. ಕೋನರಡ್ಡಿ, ಯಾಸೀರ್ ಖಾನ್ ಪಠಾಣ, ಆನಂದಸ್ವಾಮಿ ಗಡ್ಡದೇವರಮಠ, ಶ್ರೀನಿವಾಸ ಮಾನೆ, ಮಾಜಿ ಶಾಸಕರಾದ ಜಿ.ಎಸ್. ಗಡ್ಡದೇವರಮಠ, ರಾಮಣ್ಣ ಲಮಾಣಿ, ರಾಮಕೃಷ್ಣ ದೊಡ್ಡಮನಿ ಸೇರಿದಂತೆ ಹಲವು ಮುಖಂಡರು, ಕಾಂಗ್ರೆಸ್ ಕಾರ್ಯಕರ್ತರು ಹಾಗೂ ಡಿ.ಕೆ. ಶಿವಕುಮಾರ ಅಭಿಮಾನಿ ಬಳಗದವರು ಉಪಸ್ಥಿತರಿದ್ದರು.

## ಜಿಲ್ಲಾ ಮಟ್ಟದ ಮುಕ್ತ ಯೋಗಾಸನ ಸ್ಪರ್ಧೆಯಲ್ಲಿ ಸಾಹಿತ್ಯ ಜಾಧವ ಸಾಧನೆ




**ವಿಜಯಸಾಕ್ಷಿ ಸುದ್ದಿ, ಗದಗ**

ನಿಸರ್ಗ ಯೋಗ ಸೆಂಟರ್, ಧಾರವಾಡ ಹಾಗೂ ಕಿಟಲ್ ಕಲಾ ಮಹಾವಿದ್ಯಾಲಯ, ಧಾರವಾಡ ಇವರ ಸಹಯೋಗದಲ್ಲಿ ಇತ್ತೀಚೆಗೆ ನಡೆದ ಜಿಲ್ಲಾ ಮಟ್ಟದ ಮುಕ್ತ ಯೋಗಾಸನ ಸ್ಪರ್ಧೆಯಲ್ಲಿ ಸಿದ್ಧಲಿಂಗನಗರದ ಬಸವೇಶ್ವರ ಹಿರಿಯ ಪ್ರಾಥಮಿಕ ಆಂಗ್ಲ ಮಾಧ್ಯಮ ಶಾಲೆಯ ವಿದ್ಯಾರ್ಥಿನಿ ಸಾಹಿತ್ಯ ಕೆ. ಜಾಧವ ಉತ್ತಮ ಸಾಧನೆ ಮಾಡಿದ್ದಾರೆ.

8ರಿಂದ 12 ವರ್ಷದೊಳಗಿನ ಬಾಲಕಿಯರ ವಿಭಾಗದಲ್ಲಿ ಸ್ಪರ್ಧಿಸಿದ ಸಾಹಿತ್ಯ ಜಾಧವ ಅವರು ಆರನೇ ಸ್ಥಾನ ಪಡೆದು ಗಮನಾರ್ಹ ಸಾಧನೆ ಮಾಡಿದ್ದಾರೆ.

ಯೋಗಾಸನ ಸ್ಪರ್ಧೆಯಲ್ಲಿ ಯಶಸ್ಸು ಸಾಧಿಸಿದ ಸಾಹಿತ್ಯ ಜಾಧವ ಅವರನ್ನು ಶಾಲೆಯ ಮುಖ್ಯೋಪಾಧ್ಯಾಯಿನಿ ಲತಾ ಕಾಲವಾಡ, ಶಿವಾನಂದ ಗಿಡ್ಡಕೆಂಚಣ್ಣವರ, ದೈಹಿಕ ಶಿಕ್ಷಣ ಶಿಕ್ಷಕ ಎಸ್.ಎಂ. ಬುರಡಿ, ಪಾಲಕರಾದ ಮಾಲಾಶ್ರೀ ಹಾಗೂ ಕೃಷ್ಣಾಜಿ ಜಾಧವ ಮತ್ತು ಯೋಗಾಸನ ಕ್ರೀಡಾಭಿಮಾನಿಗಳು ಅಭಿನಂದಿಸಿದ್ದಾರೆ.

ಮುಂದಿನ ದಿನಗಳಲ್ಲಿಯೂ ಇನ್ನಷ್ಟು ಉನ್ನತ ಸಾಧನೆ ಮಾಡುವಂತಾಗಲಿ ಎಂದು ಶುಭ ಹಾರೈಸಿದ್ದಾರೆ.

### ಸೆ. 6ರಂದು ಬೆಂಗಳೂರಿನಲ್ಲಿ 'ಸ್ಟಡಿ ಅಬ್ರಾಡ್-2026' ಕಾರ್ಯಕ್ರಮ

## ವಿದೇಶದಲ್ಲಿ ಉನ್ನತ ಶಿಕ್ಷಣಕ್ಕೆ ಅವಕಾಶ



**ವಿಜಯಸಾಕ್ಷಿ ಸುದ್ದಿ, ಗದಗ**

ರಾಜ್ಯದ ವಿದ್ಯಾರ್ಥಿ–ವಿದ್ಯಾರ್ಥಿನಿಯ–ರಿಗೆ ಜಾಗತಿಕ ಉನ್ನತ ಶಿಕ್ಷಣದ ಅವಕಾಶಗಳ ಕುರಿತು ಮಾಹಿತಿ ನೀಡುವ ಉದ್ದೇಶದಿಂದ 'ವಿದೇಶದಲ್ಲಿ ಅಧ್ಯಯನ–2026' (ಖಣಣಜಥಿ ಂಭಡಿಂಚಿಜ–2026) ಕಾರ್ಯಕ್ರಮವನ್ನು ಸೆಪ್ಟೆಂಬರ್ 6ರಂದು ಬೆಂಗಳೂರಿನಲ್ಲಿ ಆಯೋಜಿಸಲಾಗಿದೆ.

ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಕರ್ನಾಟಕ ವೃತ್ತಿ ತರಬೇತಿ ಮತ್ತು ಕೌಶಲ್ಯಾಭಿವೃದ್ಧಿ ನಿಗಮವು ಅಂತರರಾಷ್ಟ್ರೀಯ ಏಜೆನ್ಸಿಯಾಗಿ ಈ ಕಾರ್ಯಕ್ರಮವನ್ನು ಆಯೋಜಿಸಿದೆ.

ಕಾರ್ಯಕ್ರಮವು ಬೆಂಗಳೂರಿನ ಗೇಟ್ ನಂ. 4, ಗಾಯತ್ರಿ ಗ್ರೌಂಡ್, ಗಾಯತ್ರಿ ವಿಹಾರ ಪ್ಯಾಲೇಸ್ ಗ್ರೌಂಡ್‌ನಲ್ಲಿ ನಡೆಯಲಿದೆ.

ಉನ್ನತ ಶಿಕ್ಷಣಕ್ಕಾಗಿ ವಿದೇಶಗಳಿಗೆ ತೆರಳಲು ಆಸಕ್ತಿ ಹೊಂದಿರುವ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಬಹುದು.

ಕಾರ್ಯಕ್ರಮದಲ್ಲಿ 10ಕ್ಕೂ ಹೆಚ್ಚು ವಿದೇಶಗಳ 75ಕ್ಕೂ ಹೆಚ್ಚು ಜಾಗತಿಕ ವಿಶ್ವವಿದ್ಯಾಲಯಗಳು ಭಾಗವಹಿಸಲಿವೆ. ವಿದೇಶಗಳಲ್ಲಿ ಉನ್ನತ ಶಿಕ್ಷಣ ಪಡೆಯಲು ಬಯಸುವ ವಿದ್ಯಾರ್ಥಿಗಳಿಗೆ ವಿಶ್ವವಿದ್ಯಾಲಯಗಳ ಪ್ರವೇಶ ಪ್ರಕ್ರಿಯೆ, ವಿದ್ಯಾರ್ಥಿ ವೀಸಾ, ಹಣಕಾಸು ಯೋಜನೆ, ಅರ್ಜಿ ಸಲ್ಲಿಕೆ, ಆರೋಗ್ಯ ವಿಮೆ ಹಾಗೂ ಭಾಷಾ ಪ್ರಾವೀಣ್ಯತೆ ಕುರಿತು ಒಂದೇ ವೇದಿಕೆಯಲ್ಲಿ ಮಾರ್ಗದರ್ಶನ ನೀಡಲಾಗುವುದು.

ಹಾಗೆಯೇ, ವಿದ್ಯಾರ್ಥಿಗಳಿಗೆ ವೈಯಕ್ತಿಕ ಸಮಾಲೋಚನೆ (One-on-One Sessions), ಸ್ಥಳದಲ್ಲೇ ವಿದ್ಯಾರ್ಥಿವೇತನ ಹಾಗೂ ಅರ್ಹತಾ ಮೌಲ್ಯಮಾಪನ (Spot Scholarship & Eligibility Assessment), ವಿಶ್ವವಿದ್ಯಾಲಯ ಪ್ರವೇಶ ಮಾರ್ಗದರ್ಶನ, ವೀಸಾ ಮಾರ್ಗದರ್ಶನ, ಹಣಕಾಸು ಯೋಜನೆ, ಅರ್ಜಿ ಸಲ್ಲಿಕೆಗೆ ನೆರವು, ಆರೋಗ್ಯ ವಿಮೆ ಮಾರ್ಗದರ್ಶನ ಹಾಗೂ ಭಾಷಾ ಪ್ರಾವೀಣ್ಯತೆಗಾಗಿ ಅಗತ್ಯ ಸಹಕಾರ ಸೇ–ರಿದಂತೆ ಎಂಟು ಪ್ರಮುಖ ಅಂಶಗಳ ಕುರಿತು ಮಾಹಿತಿ ಮತ್ತು ಮಾರ್ಗದರ್ಶನ ನೀಡಲಾಗುವುದು.

ವಿದ್ಯಾರ್ಥಿಗಳಿಗೆ ಶೇ. 50ರವರೆಗೆ ವಿದ್ಯಾರ್ಥಿವೇತನ ಪಡೆಯುವ ಅವಕಾಶಗಳ ಬಗ್ಗೆಯೂ ಮಾಹಿತಿ ನೀಡಲಾಗುವುದು. ಪದವಿ (Under Graduate), ಸ್ನಾತಕೋತ್ತರ (Post Graduate), ಡಾಕ್ಟರೇಟ್, ಡಿಪ್ಲೊಮಾ, ವೃತ್ತಿಪರ ಹಾಗೂ ಇತರ ಉನ್ನತ ಶಿಕ್ಷಣ ಕೋರ್ಸ್‌ಗಳಿಗಾಗಿ ವಿದೇಶಗಳ ಜಾಗತಿ–ಕ ವಿಶ್ವವಿದ್ಯಾಲಯಗಳಲ್ಲಿ ವ್ಯಾಸಂಗ ಮಾಡಲು ಬಯಸುವ ವಿದ್ಯಾರ್ಥಿಗಳಿಗೆ ಈ ಕಾರ್ಯಕ್ರಮ ಮಹತ್ವದ ಅವಕಾಶವಾಗಿದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳ ಕಚೇರಿ, ಕೊಠಡಿ ಸಂಖ್ಯೆ 106, ಜಿಲ್ಲಾಧಿಕಾರಿ ಕಚೇರಿ, ಗದಗ ಅಥವಾ ಮೊಬೈಲ್ ಸಂಖ್ಯೆ 8618650935, 9481856181, 9481008754, 8722762768, 9686352815 ಹಾಗೂ 9008234012ಗೆ ಸಂಪರ್ಕಿಸಬಹುದು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ನರೇಗಲ್ಲ: ಸಮೀಪದ ಡ.ಎಸ್. ಹಡಗಲಿ ಗ್ರಾಮದ ಶ್ರೀ ಅಮರಲಿಂಗ ಬಸವೇಶ್ವರ ಜಾತ್ರಾ ಮಹೋತ್ಸವದ ಅಂಗವಾಗಿ ಸೋಮವಾರ ಸಂಜೆ ಮಹಾರಥೋತ್ಸವವು ಸಾವಿರಾರು ಭಕ್ತಾದಿಗಳ ಸಮ್ಮುಖದಲ್ಲಿ ಶ್ರದ್ಧಾ-ಭಕ್ತಿಯಿಂದ ಜರುಗಿತು. ಗ್ರಾಮದ ವಿವಿಧೆಡೆಯಿಂದ ಆಗಮಿಸಿದ್ದ ಭಕ್ತರು ಶ್ರೀ ಅಮರಲಿಂಗ ಬಸವೇಶ್ವರರ ದರ್ಶನ ಪಡೆದು, ಭಕ್ತಿಭಾವದಿಂದ ಮಹಾರಥೋತ್ಸವದಲ್ಲಿ ಪಾಲ್ಗೊಂಡರು. ಜೈಕಾರ, ಭಜನೆ ಹಾಗೂ ಧಾರ್ಮಿಕ ಘೋಷಣೆಗಳ ಮಧ್ಯೆ ರಥೋತ್ಸವ ಸಾಗಿದ್ದು, ಗ್ರಾಮದಲ್ಲಿ ಭಕ್ತಿಯ ಸಂಭ್ರಮ ಮನೆಮಾಡಿತ್ತು.

### ಅಕ್ಕಮಹಾದೇವಿಯ ಕದಳಿಶ್ರೀ ವೇದಿಕೆಯಿಂದ ಅಮೃತಭೋಜನ-ಕಲಿಕಾ ಸಾಮಗ್ರಿ ವಿತರಣೆ

## ಆತ್ಮವಿಶ್ವಾಸವೇ ಯಶಸ್ಸಿನ ಮುನ್ನಡೆಗೆ ಪ್ರೇರಕ




**ವಿಜಯಸಾಕ್ಷಿ ಸುದ್ದಿ, ಗದಗ**

ಆತ್ಮವಿಶ್ವಾಸವು ವ್ಯಕ್ತಿಯಲ್ಲಿ ಇತರರೊಂದಿಗೆ ಬೆರೆಯುವ ಗುಣ, ಸ್ವಯಂಪ್ರೇರಣೆ, ಕಲಿಕೆಯ ಆಸಕ್ತಿ, ಅನ್ವೇಷಣಾ ಪ್ರವೃತ್ತಿ, ಪ್ರಶ್ನಿಸುವ ಮನೋಭಾವ ಹಾಗೂ ಸೃಜನಶೀಲ ಬೆಳವಣಿಗೆಯನ್ನು ಉತ್ತೇಜಿಸುತ್ತದೆ. ಆದ್ದರಿಂದ ಮಕ್ಕಳು ಆತ್ಮವಿಶ್ವಾಸದಿಂದ ಶೈಕ್ಷಣಿಕ ಸಾಧನೆಯತ್ತ ಮುನ್ನಡೆಯಬೇಕು ಎಂದು ಚಿಂತಕಿ ಅನ್ನಪೂರ್ಣ ವರವಿ ಹೇಳಿದರು.

ನಗರದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ನಂ. 15ರಲ್ಲಿ ಗದಗ ಜಿಲ್ಲಾ ಶರಣ ಸಂಕುಲದ ಶರಣೆ ಅಕ್ಕಮಹಾದೇವಿಯ ಕದಳಿಶ್ರೀ ವೇದಿಕೆ ವತಿಯಿಂದ ಪ್ರತಿವರ್ಷ ಶ್ರಾವಣ ಮಾಸದಲ್ಲಿ ಆಯೋಜಿಸಲಾಗುವ 'ಅಮೃತಭೋಜನ–ಜ್ಞಾನ ಸಿಂಚನ' ಕಾರ್ಯಕ್ರಮದಲ್ಲಿ ಮಕ್ಕಳಿಗೆ ಸಿಹಿ ಭೋಜನ ಹಾಗೂ ಕಲಿಕಾ ಸಾಮಗ್ರಿಗಳನ್ನು ವಿತರಿಸಿ ಅವರು ಮಾತನಾಡಿದರು.

ಇಂದಿನ ಸ್ಪರ್ಧಾತ್ಮಕ ಹಾಗೂ ತಂತ್ರಜ್ಞಾನ ಯುಗದಲ್ಲಿ ಮಕ್ಕಳು ಪೈಪೋಟಿಯನ್ನು ಸಮರ್ಥವಾಗಿ ಎದುರಿಸುವ ಆತ್ಮವಿಶ್ವಾಸ ಬೆಳೆಸಿಕೊಳ್ಳಬೇಕು. ಶೈಕ್ಷಣಿಕ ಸಾಧನೆಗಳಲ್ಲಿ ಮುನ್ನಡೆ ಸಾಧಿಸಲು ಆತ್ಮವಿಶ್ವಾಸವೇ ಯಶಸ್ಸಿನ ಮುನ್ನುಡಿಗೆ ಪ್ರೇರಣೆಯಾಗಲಿದೆ ಎಂದು ಹೇಳಿದರು.

ನಿವೃತ್ತ ಶಿಕ್ಷಕಿ ಸುವರ್ಣ ಗುರಮ್ಮನವರ ಅವರು ಮಕ್ಕಳಿಗೆ ಗಾದೆಮಾತುಗಳ ಕುರಿತು ತಿಳುವಳಿಕೆ ನೀಡಿದರು. ಹಿರಿಯರ ಅನುಭವದ ಸಾರವೇ ಗಾದೆಮಾತುಗಳಾಗಿದ್ದು, ಅವು ಚಿಕ್ಕದಾಗಿದ್ದರೂ ಅರ್ಥಪೂರ್ಣವಾಗಿರುತ್ತವೆ. ಪ್ರತಿಯೊಂದು ಗಾದೆಯೂ ಒಂದೊಂದು ಜೀವನ ಸಂದೇಶವನ್ನು ಒಳಗೊಂಡಿದ್ದು, ಅವುಗಳ ಅರ್ಥವನ್ನು ತಿಳಿದು ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.

ಕದಳಿಶ್ರೀ ವೇದಿಕೆಯ ಸಂಚಾಲಕಿ ಕವಿತಾ ದಂಡಿನ ಮಾತನಾಡಿ, ಶ್ರಾವಣ ಮಾಸದಲ್ಲಿ ವಿವಿಧ ಕ್ಷೇತ್ರಗಳ ಸಾಧಕರನ್ನು ಸರ್ಕಾರಿ ಶಾಲೆಗಳಿಗೆ ಆಹ್ವಾನಿಸಿ, ಜೀವನ ಮೌಲ್ಯಗಳು ಹಾಗೂ ಪ್ರೇರಣಾದಾಯಕ ವಿಚಾರಗಳನ್ನು ತಿಳಿಸಲಾಗುತ್ತಿದೆ. ಸಿಹಿ ಭೋಜನದೊಂದಿಗೆ ಕಲಿಕಾ ಸಾಮಗ್ರಿಗಳನ್ನು ವಿತರಿಸುವ ಮೂಲಕ ಸಮುದಾಯವನ್ನು ಸರ್ಕಾರಿ ಶಾಲೆಗಳತ್ತ ಸೆಳೆಯುವ ಕಾರ್ಯವನ್ನು ವೇದಿಕೆ ನಿರಂತರವಾಗಿ ನಡೆಸುತ್ತಿದೆ ಎಂದರು.

ವಿದ್ಯಾರ್ಥಿನಿಯರಾದ ಅರ್ಚನಾ ಯಂಡಿಗೇರಿ, ಲೋಕೇಶ್ವರಿ ಮುಧೋಳ ಹಾಗೂ ಮಲ್ಲಿಕಾ ದಹಿಂಡೆ ವಚನ ಪ್ರಾರ್ಥನೆ ನೆರವೇರಿಸಿದರು. ಮುಖ್ಯೋಪಾಧ್ಯಾಯಿನಿ ವಿ.ಎನ್. ಬಸಾಪೂರ ಸ್ವಾಗತಿಸಿದರು. ಬಿ. ಯಶೋಧಾ ನಿರೂಪಿಸಿದರು. ವಿ.ಬಿ. ಕರಬಸಗೌಡರ ವಂದಿಸಿದರು.

ರೇಣುಕಾ ಗೌಳಿಕೇರ, ಗಿರಿಜಾ ದಾಸರ, ಮಹಾದೇವಿ ಮೊಸಳಿ, ವಿನೋದಾ ಕೆಳಗಿನಮನಿ, ಪ್ರಿಯಾಂಕಾ ಲಮಾಣಿ, ರೇಖಾ ಮೂಗನೂರ, ರೇಣುಕಾ ಶಿಂಧೆ ಸೇರಿದಂತೆ ಇತರರು ಉಪಸ್ಥಿತರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka
Printed at : Sai Printing Press, Near Joda Maruti Temple, Gadag-582101, Dist : Gadag- Karnataka